ಸಂಪುಟ : 10 ಸಂಚಿಕೆ: 150 ಪುಟ : 4+2 ಬೆಲೆ: 3.00 ಶುಕ್ರವಾರ ಜುಲೈ 18 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ






Volume : 10 Issue : 150 Pages : 4+2 Price : 3.00 Friday July 18 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಅಪ್ರಾಪ್ತ ಮಗಳ ಮೇಲೆ ಲೈಂಗಿಕ ದೌರ್ಜನ್ಯ: ಪಾಪಿ ತಂದೆಗೆ ಜೀವಾವಧಿ ಶಿಕ್ಷೆ, 3 ಲಕ್ಷ ರೂ. ದಂಡ!

■ ವಿಜಯಸಾಕ್ಷಿ ಸುದ್ದಿ, ತಿರುವನಂತಪುರಂ

ಅಪ್ರಾಪ್ತ ಮಗಳ ಮೇಲೆ 3 ವರ್ಷ ನಿರಂತರ ಲೈಂಗಿಕ ದೌರ್ಜನ್ಯ ಎಸಗಿದ ಪಾಪಿ ತಂದೆಗೆ ಜೀವಾವಧಿ ಶಿಕ್ಷೆ ಹಾಗೂ 3 ಲಕ್ಷ ರೂ. ದಂಡ ವಿಧಿಸಿ ಕೋರ್ಟ್ ಆದೇಶ ಹೊರಡಿಸಿದೆ.

2020 ರಲ್ಲಿ ಕರಿಮನೂರ್ ಬಳಿಯ ಬಾಡಿಗೆ ಮನೆಯಲ್ಲಿದ್ದಾಗ ಅಪರಾಧಿ ಈ ಕೃತ್ಯ ಎಸಗಿದ್ದ. ನಿರಂತರ ಹೊಟ್ಟೆ ನೋವಿನಿಂದ ಬಳಲುತ್ತಿದ್ದ ಬಾಲಕಿಯನ್ನು ಚಿಕಿತ್ಸೆಗೆ ಕರೆತಂದಾಗ, ತಂದೆಯ ಕೃತ್ಯಗಳಿಂದ ನನಗೆ ಈ ಸಮಸ್ಯೆ ಆಗಿದೆಯೇ ಎಂದು ತಾಯಿಯ ಬಳಿ ಪ್ರಶ್ನಿಸಿತ್ತು. ಏನಾಯಿತು ಎಂದು ತಾಯಿ ವಿವರವಾಗಿ ಕೇಳಿದ ನಂತರ ಮತ್ತು ನಂತರದ ಕೌನ್ಸೆಲಿಂಗ್ ಸಮಯದಲ್ಲಿ ಮಗು ತನ್ನ ತಂದೆಯ ಕೃತ್ಯವನ್ನು ಹೇಳಿತ್ತು. ಬಳಿಕ ಕರಿಮನೂರು ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಪ್ರಕರಣ ದಾಖಲಾಗಿತ್ತು. ಈ ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಲಯ ಅಪರಾಧಿಗೆ ಜೀವಾವಧಿ ಶಿಕ್ಷೆ ವಿಧಿಸಿದೆ.

ಅಪರಾಧಿಗೆ ವಿಧಿಸಿದ ದಂಡವನ್ನು ದೌರ್ಜನ್ಯಕ್ಕೊಳಗಾದ ಬಾಲಕಿಗೆ ಕೊಡಬೇಕು ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

### ಜಮೀನು ಒತ್ತುವರಿ ಪ್ರಕರಣ; ನ್ಯಾಯಾಂಗ ನಿಂದನೆ ಕೇಸ್‌ನಲ್ಲಿ ಕುಮಾರಸ್ವಾಮಿಗೆ ಬಿಗ್ ರಿಲೀಫ್!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಿಡದಿ ಬಳಿಯ ಕೇತಗಾನಹಳ್ಳಿಯಲ್ಲಿ ಜಮೀನು ಒತ್ತುವರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಅವರಿಗೆ ಸುಪ್ರೀಂಕೋರ್ಟ್ ಬಿಗ್ ರಿಲೀಫ್ ನೀಡಿದೆ.

ಕರ್ನಾಟಕ ಹೈಕೋರ್ಟ್‌ನಲ್ಲಿ ದಾಖಲಿಸಿರುವ ನ್ಯಾಯಾಂಗ ನಿಂದನೆ ವಿಚಾರಣೆಗೆ ಸುಪ್ರೀಂಕೋರ್ಟ್ ತಾತ್ಕಾಲಿಕವಾಗಿ ತಡೆ ನೀಡಿದೆ. ಹೈಕೋರ್ಟ್ ಆದೇಶ ಪ್ರಶ್ನಿಸಿ ಕುಮಾರಸ್ವಾಮಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಪಂಕಜ್ ಮಿಥಲ್ ಹಾಗೂ ನ್ಯಾಯಾಮೂರ್ತಿ ಪ್ರಸನ್ನ ಬಿ. ವರಾಳೆ ಅವರ ದ್ವಿಸದಸ್ಯ ಪೀಠ, ಮುಂದಿನ ಆದೇಶದವರೆಗೂ ಕುಮಾರಸ್ವಾಮಿ ವಿರುದ್ಧದ ನ್ಯಾಯಾಂಗ ನಿಂದನೆ ಪ್ರಕರಣದ ವಿಚಾರಣೆಗೆ ತಡೆ ನೀಡಿ ಆದೇಶ ಹೊರಡಿಸಿದೆ.

ಸುಪ್ರೀಂಕೋರ್ಟ್‌ನಲ್ಲಿ ನ್ಯಾಯಾಂಗ ನಿಂದನೆ ಪ್ರಶ್ನಿಸಿ ಸಲ್ಲಿಸಿರುವ ಅರ್ಜಿ ವಿಚಾರಣೆಗೆ ಬಾಕಿ ಇರುವುದರಿಂದ ತಮ್ಮ ವಿರುದ್ಧದ ಕಾನೂನು ಪ್ರಕ್ರಿಯೆಗೆ ತಡೆ ನೀಡುವಂತೆ ಕುಮಾರಸ್ವಾಮಿ ಹೈಕೋರ್ಟ್‌ಗೆ ಮನವಿ ಮಾಡಿದ್ದರು. ಕುಮಾರಸ್ವಾಮಿ ಅವರ ಮನವಿ ಪರಿಗಣಿಸಿದ ನ್ಯಾಯಾಲಯ, ಮಾರ್ಚ್ 27 ರವರೆಗೂ ಅರ್ಜಿದಾರರ ವಿರುದ್ಧ ಯಾವುದೇ ಬಲವಂತದ ಕ್ರಮ ಕೈಗೊಳ್ಳಬಾರದು ಎಂದು ಆದೇಶಿಸಿ ವಿಚಾರಣೆಯನ್ನು ಮುಂದೂಡಿತ್ತು. ಇದೀಗ ಸುಪ್ರೀಂಕೋರ್ಟ್, ಕುಮಾರಸ್ವಾಮಿ ವಿರುದ್ಧ ನ್ಯಾಯಾಂಗ ನಿಂದನೆ ವಿಚಾರಣೆಗೆ ತಡೆ ನೀಡಿ ಆದೇಶಿಸಿದೆ.

### ಜಿಲ್ಲಾ ಅಭಿವೃದ್ಧಿ ಸಮನ್ವಯ, ಉಸ್ತುವಾರಿ ಸಮಿತಿ ಸಭೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ

# ನೀರು ಪೂರೈಕೆಗೆ ಗಂಭೀರ ಕ್ರಮ ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರಕ್ಕೆ ನಿರಂತರ ನೀರು ಪೂರೈಕೆ ಯೋಜನೆ 2017ರಲ್ಲಿಯೇ ಲೋಕಾರ್ಪಣೆಗೊಂಡಿದೆ. ಆದರೂ ಸರಿಯಾಗಿ ವಾರ್ಡ್‌ವಾರು ನಿರಂತರ ನೀರು ಪೂರೈಕೆ ಸಾಧ್ಯವಾಗಿಲ್ಲ. ಈ ಬಗ್ಗೆ ನಗರಸಭೆ ಅಧಿಕಾರಿಗಳು ಗಂಭೀರ ಕ್ರಮ ಕೈಗೊಳ್ಳಬೇಕೆಂದು ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಸೂಚಿಸಿದರು.

ಗದಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ (ದಿಶಾ) ಸಮಿತಿ ಸಭೆ ಹಾಗೂ ವಿವಿಧ ಇಲಾಖೆಗಳ ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅವಳಿ ನಗರಕ್ಕೆ ನೀರು ಪೂರೈಕೆ ಕುರಿತಂತೆ ಶಾಸಕ ಸಿ.ಸಿ. ಪಾಟೀಲ ಹಾಗೂ ವಿ.ಪ ಸದಸ್ಯ ಎಸ್.ವಿ. ಸಂಕನೂರ ಅವರುಗಳೂ ಸಹ ಅಸಮರ್ಪಕ ನೀರು ಪೂರೈಕೆಯನ್ನು ಸರಿಪಡಿಸುವಂತೆ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿದರು. ಹಿಂದಿನ ಸಭೆಯಲ್ಲಿ ಸೂಚಿಸಿದ ಕಾರ್ಯಗಳನ್ನು ಸರಿಯಾಗಿ ಅನುಷ್ಠಾನಗೊಳಿಸಿ ವಿಶಿಷ್ಟ ಸಾಧನೆಯೊಂದಿಗೆ ಅಧಿಕಾರಿಗಳು ಸಭೆಗೆ ಆಗಮಿಸಬೇಕು. ಪ್ರತಿ ಸಭೆಯಲ್ಲಿ ನೀಡಿರುವ ಸೂಚನೆಗಳ ಪಾಲನೆ ಮಾಡಿ ಗದಗ ಜಿಲ್ಲೆ ಆರ್ಥಿಕ ಪ್ರಗತಿಯಲ್ಲಿ ಅಧಿಕಾರಿ ವರ್ಗ ಭಾಗಿಯಾಗಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.




ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಮೆಕ್ಕೆಜೋಳ ಅಧಿಕವಾಗಿ ಬಿತ್ತನೆ ಮಾಡಲಾಗಿದೆ. ಅದಕ್ಕಾಗಿ ಹೆಚ್ಚುವರಿ ಯೂರಿಯಾ ರಸಗೊಬ್ಬರ ಅಗತ್ಯವಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ಸಭೆಗೆ ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಂಸದ ಬಸವರಾಜ ಬೊಮ್ಮಾಯಿ, ಜಿಲ್ಲೆ ಸೇರಿದಂತೆ ರಾಜ್ಯದ ಒಟ್ಟು ರಸಗೊಬ್ಬರದ ಬೇಡಿಕೆ ಪ್ರಸ್ತಾವನೆಯನ್ನು ಕೇಂದ್ರಕ್ಕೆ ಸಲ್ಲಿಸಿ ಮಾಹಿತಿ ಒದಗಿಸಿದಲ್ಲಿ ರಸಗೊಬ್ಬರ ಪೂರೈಕೆಗೆ ಪ್ರಯತ್ನಿಸಲಾಗುವುದು ಎಂದರು. ಸಭೆಯಲ್ಲಿ ವಸತಿ ಯೋಜನೆ, ಶಿಕ್ಷಣ, ಆರೋಗ್ಯ, ಕೌಶಲ್ಯ ಅಭಿವೃದ್ಧಿ, ಉನ್ನತ ಶಿಕ್ಷಣ ವಿಷಯಗಳ ಕುರಿತಂತೆ ಶಾಸಕರುಗಳಾದ ಡಾ. ಚಂದ್ರು ಲಮಾಣಿ, ಸಿ.ಸಿ. ಪಾಟೀಲ, ಎಸ್.ವಿ. ಸಂಕನೂರ ಚರ್ಚೆ ನಡೆಸಿದರು. ನಗರಾಭಿವೃದ್ಧಿ ಇಲಾಖೆಯಿಂದ ಎಎಚ್‌ಪಿ ಯೋಜನೆಯಡಿ ಗದಗ ಬೆಟಗೇರಿ ಅವಳಿ ನಗರದಲ್ಲಿ 3630 ಮನೆಗಳ ನಿರ್ಮಾಣದಲ್ಲಿ ಒಂದನೇ ಹಂತದಲ್ಲಿ 1008 ಮನೆಗಳ ಪೈಕಿ 248 ಮನೆಗಳು ಪೂರ್ಣಗೊಂಡಿದ್ದು ಹಂಚಿಕೆ ಮಾಡಲಾಗಿದೆ. ಉಳಿದ 758 ಮನೆಗಳು ಪೂರ್ಣಗೊಳ್ಳುವ ಹಂತದಲ್ಲಿವೆ.

> ಗದಗ-ಬೆಟಗೇರಿ ಅವಳಿ ನಗರಕ್ಕೆ ನೀರು ಪೂರೈಕೆಗಾಗಿ ಈಗಾಗಲೇ ತುಂಗಭದ್ರಾ ಹಾಗೂ ಮಲಪ್ರಭಾ ನದಿಯಿಂದ ನೀರು ಪೂರೈಕೆಗೆ ಯೋಜನೆ ಸಿದ್ಧಪಡಿಸಿ ಅನುಷ್ಠಾನಗೊಳಿಸುವ ಮೂಲಕ ನಿರಂತರ ನೀರು ಒದಗಿಸಲು ಚಾಲನೆ ನೀಡಲಾಗಿದ್ದರೂ ಈವರೆಗೂ ನಗರದ ಸಾರ್ವಜನಿಕರಿಗೆ ನಿಯಮಿತವಾಗಿ ನೀರು ಪೂರೈಕೆ ಸಾಧ್ಯವಾಗದಿರುವುದು ವಿಷಾದನೀಯ. ಅಧಿಕಾರಿ ವರ್ಗ ಮಾತ್ರ ಈ ಹಿಂದೆ ನೀಡಿರುವ ಸೂಚನೆಯನ್ನು ಪಾಲನೆ ಮಾಡುವಲ್ಲಿ ವಿಳಂಬ ಧೋರಣೆ ತಾಳಿದಂತಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

▸▸3ನೇ ಪುಟಕ್ಕೆ

### ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ರೋಣ ಬಸ್ ನಿಲ್ದಾಣ ಪರಿಶೀಲನೆ

# ಸ್ವಚ್ಛತೆಗೆ ಪ್ರಥಮ ಆದ್ಯತೆ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ನೇತೃತ್ವದಲ್ಲಿ ರೋಣ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ ಜಿ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಗ್ಯಾರಂಟಿ ಸಮಿತಿ ಸದಸ್ಯರು ರೋಣ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಗಳ ಪರಿಶೀಲನೆ ನಡೆಸಿದರು.

ರೋಣ ಬಸ್ ನಿಲ್ದಾಣದ ಆವರಣವನ್ನು ಪರಿಶೀಲಿಸಿದ ಜಿಲ್ಲಾ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಆಗಸ್ಟ್ 5ರಂದು ಪುನಃ ಬಸ್ ನಿಲ್ದಾಣಕ್ಕೆ ಪರಿಶೀಲನೆಗಾಗಿ ಆಗಮಿಸುವೆ. ಆ ಸಂದರ್ಭದಲ್ಲಿ ಬಸ್ ನಿಲ್ದಾಣ ಆವರಣ ಶುಚಿಯಾಗಿರಬೇಕು. ನಿಲ್ದಾಣದಲ್ಲಿನ ಸಾರ್ವಜನಿಕರಿಗೆ ಕೂರಲು ಉತ್ತಮ ಆಸನಗಳ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಅಲ್ಲದೇ ಪ್ಲಾಸ್ಟಿಕ್ ಮುಕ್ತ ನಿಲ್ದಾಣ ಆಗಬೇಕು. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಶಾಲೆಯ ವಿದ್ಯಾರ್ಥಿಗಳಿಗೆ ಗ್ರಾಮಗಳಿಂದ ರೋಣ ಪಟ್ಟಣಕ್ಕೆ ಬಂದು ಹೋಗಲು ಸರಿಯಾದ ಬಸ್ಸಿನ ವ್ಯವಸ್ಥೆ ಮಾಡಬೇಕು ಎಂದು ನಿರ್ದೇಶನ ನೀಡಿದರು.

ನಿಲ್ದಾಣದ ಆವರಣದಲ್ಲಿರುವ ಶೌಚಾಲಯದ ಪರಿಶೀಲನೆ ನಡೆಸಿ, ಸ್ವಚ್ಛತೆಗೆ ಆದ್ಯತೆ ವಹಿಸಬೇಕು. ವಿಕಲಚೇತನರಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಮಾಡಬೇಕು. ಸಾರ್ವಜನಿಕರಿಂದ ನಿಗದಿತ ಶುಲ್ಕ ಪಡೆದು ಶೌಚಾಲಯ ಬಳಕೆಗೆ ಅವಕಾಶ ಕಲ್ಪಿಸಬೇಕು. ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿರುವ ಕುರಿತು ದೂರುಗಳು ಬಂದಿದ್ದು, ನಿಗದಿತ ದರದ ಬೋರ್ಡ್ ಹಾಕಬೇಕು ಎಂದು ಸೂಚಿಸಿದರು.



ನಿಲ್ದಾಣದ ಆವರಣದಲ್ಲಿರುವ ಶಿಶು ಆರೈಕೆ ವಿಶ್ರಾಂತಿ ಕೊಠಡಿಗೆ ಭೇಟಿ ನೀಡಿದ ಅವರು, ವಿಶ್ರಾಂತಿ ಕೊಠಡಿಯಲ್ಲಿ ಶುದ್ಧ ಗಾಳಿ, ಬೆಳಕಿನ ವ್ಯವಸ್ಥೆ ಕಲ್ಪಿಸಬೇಕು. ಪ್ರತಿನಿತ್ಯ ವಿಶ್ರಾಂತಿ ಕೊಠಡಿಗೆ ಸಾರ್ವಜನಿಕರು ಆಗಮಿಸುವಂತೆ ಶುಚಿಯಾಗಿಟ್ಟುಕೊಳ್ಳಲು ಸಾರಿಗೆ ಸಂಸ್ಥೆಯ ಅಧಿಕಾರಿ ಡಿ.ಸಿ. ದೇವರಾಜ ಅವರಿಗೆ ಬಿ.ಬಿ. ಅಸೂಟಿ ನಿರ್ದೇಶನ ನೀಡಿದರು.

> ಈ ಸಂದರ್ಭದಲ್ಲಿ ಫಲಾನುಭವಿಗಳು ತಮ್ಮ ಮನದಾಳದ ಅಭಿಪ್ರಾಯಗಳನ್ನು ವ್ಯಕ್ತಪಡಿಸಿ, ಶಕ್ತಿ ಯೋಜನೆ ಮಹಿಳೆಯರ ಸಬಲತೆಗೆ ಶಕ್ತಿಯಾಗಿ ನಿಂತಿದೆ. ಅದರಂತೆ ಸುಸ್ಥಿರ ಬದುಕಿಗಾಗಿ ಗೃಹಲಕ್ಷ್ಮೀ ಯೋಜನೆ, ಹಸಿವು ಮುಕ್ತ ಕರ್ನಾಟಕಕ್ಕೆ ಅನ್ನಭಾಗ್ಯ ಹಾಗೂ ಬಡವರ ಆಶಾಕಿರಣ ಗೃಹ ಜ್ಯೋತಿ, ನಿರುದ್ಯೋಗ ನಿವಾರಣೆಗೆ ಯುವನಿಧಿ ಸಹಕಾರಿಯಾಗಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್. ಸಚಿವರಾದ ಎಚ್.ಕೆ. ಪಾಟೀಲ ಸೇರಿದಂತೆ ಸರ್ಕಾರಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು.

ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಸಮಿತಿಯ ಉಪಾಧ್ಯಕ್ಷರಾದ ಪರಶುರಾಮ್ ಅಳಗವಾಡಿ, ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರಾದ ರಫೀಕ್ ಮೂಗನೂರ್, ಬಿ.ಎಸ್. ರಡ್ಡೇರ, ಸಂಗು ನವಲಗುಂದ, ಮೇಘರಾಜ್, ಸಿದ್ದಪ್ಪ ಯಾಳಗಿ, ಹನುಮಂತಪ್ಪ ಸ್ವಾಲದ, ನಾಜಬೇಗಂ ಎಲಿಗಾರ, ಬಸವರಾಜ್ ತಳವಾರ, ಸುರೇಶ್, ಎಲ್ಲಪ್ಪ ಕಿರೇಸೂರು, ಗೀತಾ ಕೊಪ್ಪದ್, ಶರಣಪ್ಪ ಕುರಿಯೂರು ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ರಾಜ್ಯ ಸರ್ಕಾರ ಕೋಮಾ ಸ್ಥಿತಿಯಲ್ಲಿದೆ




■ ವಿಜಯಸಾಕ್ಷಿ ಸುದ್ದಿ, ಗದಗ

ನಾನು ಹಾಗೂ ಜನಾರ್ಧನ ರೆಡ್ಡಿ ಒಂದಾಗುತ್ತೇವೆ. ಇದರಲ್ಲಿ ಯಾವುದೇ ಸಂಶಯವಿಲ್ಲ ಎಂದು ಮಾಜಿ ಸಚಿವ ಶ್ರೀರಾಮುಲು ಹೇಳಿದರು.

ಗದುಗಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು, ಜನಾರ್ಧನ ರೆಡ್ಡಿ ಒಂದಾಗುವುದು ನಿಶ್ಚಿತ. ನಮ್ಮಿಬ್ಬರ ನಡುವೆ ಯಾವುದೇ ಗೊಂದಲವಿಲ್ಲ. ಹೀಗಾಗಿ, ಸಂಧಾನ ಮಾಡುವ ಪರಿಸ್ಥಿತಿ ಬಂದಿಲ್ಲ. ಪಕ್ಷದ ಹಿತದೃಷ್ಟಿಯಿಂದ ರಾಜಕೀಯವಾಗಿ ನಾವು ಒಂದಾಗುತ್ತೇವೆ. ನಾನಾಗಲಿ, ಜನಾರ್ಧನ ರೆಡ್ಡಿಯವರಾಗಲಿ, ಬೇರೆ ಯಾರೇ ಆದರೂ ಪಕ್ಷದ ಹಿತದೃಷ್ಟಿಯಿಂದ ಒಂದಾಗಬೇಕು. ಎಲ್ಲರೂ ಒಂದಾದರೆ ಜನಾರ್ದನ ರೆಡ್ಡಿ-ರಾಮುಲು ಬೇರೆ ಅಲ್ಲ ಎಂದರು.

ಅಂದಿನ ಪರಿಸ್ಥಿತಿಯಲ್ಲಿನ ಬೆಳವಣಿಗೆಗಳನ್ನು ನಾವಿಬ್ಬರೂ ಮರೆತಿದ್ದೇವೆ. ಮತ್ತೆ ಅಧಿಕಾರಕ್ಕೆ ಬರಬೇಕೆಂದರೆ ಮತ್ತೆ ನಾವೆಲ್ಲಾ ಒಂದಾಗಬೇಕಿದೆ. ಒಂದಾಗಿ ಚುನಾವಣೆ ಎದುರಿಸುತ್ತೇವೆ ಎಂದು ಹೇಳಿದರು.

ರಾಜ್ಯದ ಕಾಂಗ್ರೆಸ್ ಸರ್ಕಾರ ಗೊಂದಲದ ಆಡಳಿತ ನಡೆಸುತ್ತಿದೆ. ರಾಜ್ಯದ ಮುಖ್ಯಮಂತ್ರಿ ಯಾರು ಎಂಬ ಪ್ರಶ್ನೆ ಎದುರಾಗಿದೆ. ಈ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಾ ಅಥವಾ ಸುರ್ಜೇವಾಲಾ ಅವರಾ ಎಂದು ಸ್ಪಷ್ಟೀಕರಣ ಕೊಡಬೇಕು. ಸಿಎಂಗೆ ಯಾವುದೇ ಕಿಮ್ಮತ್ತು ಇಲ್ಲದ ಪರಿಸ್ಥಿತಿಯನ್ನು ಸುರ್ಜೇವಾಲಾ ನಿರ್ಮಿಸುತ್ತಿದ್ದಾರೆ. ಈ ಸರ್ಕಾರ ಕೋಮಾ ಸ್ಥಿತಿಯಲ್ಲಿದೆ. ಆಕ್ಸಿಜನ್ ಪೂರೈಕೆ ತೆಗೆದರೆ ಸರ್ಕಾರ ಬಿದ್ದು ಹೋಗುತ್ತದೆ. ರಾಜ್ಯದಲ್ಲಿ ಮಂತ್ರಿಗಳು ಅನುದಾನ ತಂದು ಅಭಿವೃದ್ಧಿ ಮಾಡಲು ಆಗುತ್ತಿಲ್ಲ. ಶಾಸಕರು, ಮಂತ್ರಿಗಳು ಅಸಮಾಧಾನದಿಂದ ಇದ್ದಾರೆ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಮಾಜಿ ಸಚಿವ ಶ್ರೀರಾಮುಲು ವಾಗ್ದಾಳಿ ನಡೆಸಿದರು.

### ಜಿಲ್ಲಾ ಮಟ್ಟದ ಬ್ಯಾಂಕ್‌ಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಅಸಮಾಧಾನ

# ಠೇವಣಿ-ಸಾಲದ ಅನುಪಾತದಲ್ಲಿ ವ್ಯತ್ಯಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ವರ್ಷ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆಯಡಿ ಸ್ವಸಹಾಯ ಗುಂಪುಗಳಿಂದ 2500 ಅರ್ಹರಿಗೆ 90.85 ಕೋಟಿ ಸಾಲ/ಅನುದಾನ ನೀಡುವ ಗುರಿ ಹೊಂದಲಾಗಿದ್ದರೂ, ಕೇವಲ 1683 ಅರ್ಹರಿಗೆ 30.49 ಕೋಟಿ ಮಾತ್ರ ನೀಡಿಕೆಯಾಗಿದೆ. ಈ ಯೋಜನೆಯಲ್ಲಿ ಶೇ. 100ರಷ್ಟು ಗುರಿ ಸಾಧಿಸಬೇಕು. ಸ್ವ-ಸಹಾಯ ಗುಂಪುಗಳಿಂದ ಅರ್ಜಿ ಸ್ವೀಕರಿಸುವುದಕ್ಕೆ ಬ್ಯಾಂಕರ್‌ಗಳು ನಿರಾಸಕ್ತಿ ತೋರುತ್ತಿದ್ದಾರೆ. ಹೀಗಾದರೆ, ಗ್ರಾಮೀಣ ಭಾಗದ ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳುವುದು ಹೇಗೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಅಸಮಾಧಾನ ವ್ಯಕ್ತಪಡಿಸಿದರು.

ಜಿ.ಪಂ ಸಭಾಂಗಣದಲ್ಲಿ ಗುರುವಾರ ನಡೆದ ಜಿಲ್ಲಾ ಮಟ್ಟದ ಬ್ಯಾಂಕ್‌ಗಳ ಪ್ರಗತಿ ಪರಿಶೀಲನಾ ಸಭೆ (ಡಿಎಸ್‌ಆರ್‌ಸಿ) ಹಾಗೂ ಜಿಲ್ಲಾ ಮಟ್ಟದ ಬ್ಯಾಂಕ್‌ಗಳ ಸಲಹಾ ಸಮಿತಿ (ಡಿಸಿಸಿ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




ಜಿಲ್ಲೆಯಲ್ಲಿ ರಾಷ್ಟ್ರೀಕೃತ ಬ್ಯಾಂಕ್ ಮತ್ತು ಖಾಸಗಿ ಬ್ಯಾಂಕುಗಳಲ್ಲಿ ಠೇವಣಿ ಮತ್ತು ಸಾಲದ ಅನುಪಾತದಲ್ಲಿ ಸಾಕಷ್ಟು ವ್ಯತ್ಯಾಸವಿದೆ. ಬ್ಯಾಂಕ್ ಅಧಿಕಾರಿಗಳು ಕುರ್ಚಿಗೆ ಅಂಟಿಕೊಂಡು ಕೆಲಸ ಮಾಡಿದರೆ ಈ ವ್ಯತ್ಯಾಸ ಕಡಿಮೆ ಮಾಡಲು ಸಾಧ್ಯವಿಲ್ಲ ಎಂದರು.

ಕೇಂದ್ರ ಮತ್ತು ರಾಜ್ಯ ಸರಕಾರದಿಂದ ಡಿಬಿಟಿ ಮೂಲಕ ಬರುವ ಹಣವನ್ನು ಸಾಲ ಸೌಲಭ್ಯಕ್ಕೆ ಹೊಂದಾಣಿಕೆ ಮಾಡಿಕೊಳ್ಳಬಾರದು ಎನ್ನುವ ಸುತ್ತೋಲೆ ಇದೆ. ಅಲ್ಲದೇ ಡಿಬಿಟಿ ಹಣವನ್ನು ಖಾತೆಗೆ ಜಮೆ ಮಾಡದೇ ತಡೆಹಿಡಿಯುವುದು ಸರಿಯಲ್ಲ. ಅಂಥ ಘಟನೆ ಕಂಡುಬಂದರೆ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಂಸದರು ಎಚ್ಚರಿಸಿದರು.

> ಜಿಲ್ಲೆಯಲ್ಲಿ ಆಹಾರ ಸಂಸ್ಕರಣಾ ಘಟಕ ಸ್ಥಾಪನೆಗೆ ವಿಪುಲ ಅವಕಾಶಗಳಿವೆ. ಆದರೆ, ಅಂತಹ ಘಟಕಗಳಿಗೆ ಬ್ಯಾಂಕ್‌ಗಳು ಸಾಲ ನೀಡುತ್ತಿಲ್ಲ. ಇದರಿಂದ ಸಣ್ಣ ಮತ್ತು ಮಧ್ಯಮ ಕೈಗಾರಿಕೋದ್ಯಮಿಗಳು ಘಟಕ ಸ್ಥಾಪನೆಗೆ ಮುಂದೆ ಬರುತ್ತಿಲ್ಲ. ಬ್ಯಾಂಕ್ ಅಧಿಕಾರಿಗಳು ಅಂಥವರನ್ನು ಗುರುತಿಸಿ, ಸಾಲ ವಿತರಿಸುವ ಮೂಲಕ ಆರ್ಥಿಕ ಶಕ್ತಿ ನೀಡುವಂತಾಗಬೇಕು.
>
> **– ಬಸವರಾಜ ಬೊಮ್ಮಾಯಿ.**
> **ಸಂಸದರು, ಹಾವೇರಿ, ಗದಗ ಕ್ಷೇತ್ರ.**

ನಗರದಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ನಿರ್ಮಿಸುತ್ತಿರುವ 3630 ಮನೆಗಳ ಬಗ್ಗೆ ಚರ್ಚೆ ನಡೆದು, ಯೋಜನೆ ಮುಕ್ತಾಯಗೊಳ್ಳುವುದು ಯಾವಾಗ ಎಂದು ಬೊಮ್ಮಾಯಿ ಅಸಮಾಧಾನ ವ್ಯಕ್ತಪಡಿಸಿದರು. ಕೆಲವು ಮನೆಗಳು ಪೂರ್ಣಗೊಂಡಿವೆ, ಇನ್ನು ಕೆಲವು ಅಪೂರ್ಣವಾಗಿವೆ. ಕೆಲವರು ನ್ಯಾಯಾಲಯದ ಮೊರೆ ಹೋಗಿದ್ದಾರೆ, ಮತ್ತೆ ಕೆಲವರಿಗೆ ಸಾಲ ಸಿಗುತ್ತಿಲ್ಲ. ಈಗಾಗಲೇ ನಾಲ್ಕು ವರ್ಷಗಳು ಕಳೆದಿದ್ದು, ಹೀಗೆಯೇ ದಿನ ಕಳೆಯುತ್ತಿದ್ದರೆ ಯೋಜನೆಯೇ ಬದಲಾಗುತ್ತದೆ ಮತ್ತು ವೆಚ್ಚವೂ ಏರಿಕೆಯಾಗುತ್ತದೆ ಎಂದು ಬೊಮ್ಮಾಯಿ ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಸಿಇಒ ಭರತ್ ಎಸ್, ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ ಎಂ.ವಿ, ಆರ್.ಬಿ.ಐ ಲೀಡ್ ಬ್ಯಾಂಕ್‌ನ ಜಿಲ್ಲಾ ಮಟ್ಟದ ಅಧಿಕಾರಿ ಸೂರಜ್ ಎಸ್, ಎಸ್.ಬಿ.ಐ ಪ್ರಾದೇಶಿಕ ವ್ಯವಸ್ಥಾಪಕ ನಾಗಸುಬ್ಬಾ ರೆಡ್ಡಿ, ನಬಾರ್ಡ್‌ನ ಡಿಡಿಎಂ ಮಯೂರ ಕಾಂಬಳೆ ಹಾಗೂ ಬ್ಯಾಂಕಿನ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂಪಾದಕೀಯ

# ಜನಸ್ನೇಹಿ ಪೊಲೀಸ್ ಸುರಕ್ಷಿತ ಸಮಾಜ ಸೃಷ್ಟಿಗೆ ಕಾರಣವಾಗಲಿ

ಸಮಾಜದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವುದು, ಅಪರಾಧ ತಡೆಗಟ್ಟುವುದು ಹಾಗೂ ಪ್ರತಿಯೊಬ್ಬರಿಗೂ ಸುರಕ್ಷಿತ ವಾತಾವರಣ ಕಲ್ಪಿಸುವುದು ಪೊಲೀಸ್ ಇಲಾಖೆಯ ಮೂಲಭೂತ ಜವಾಬ್ದಾರಿಗಳು.

ಈ ನಿಟ್ಟಿನಲ್ಲಿ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮವು ಒಂದು ಅತ್ಯುತ್ತಮ ಹೆಜ್ಜೆಯಾಗಿದೆ. ಇದು ಕೇವಲ ಒಂದು ಯೋಜನೆಗಿಂತ ಹೆಚ್ಚಾಗಿ, ಸಾರ್ವಜನಿಕರೊಂದಿಗೆ ಸಂಪರ್ಕ ಸಾಧಿಸುವ ಮತ್ತು ನಂಬಿಕೆ ಬೆಳೆಸುವ ಒಂದು ಪ್ರಯತ್ನವಾಗಿದೆ.

ಈ ಕಾರ್ಯಕ್ರಮದಡಿ, ಮಹಿಳಾ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಮನೆ ಮನೆಗೆ ತೆರಳಿ, ವಿಶೇಷವಾಗಿ ಮಹಿಳೆಯರು ಮತ್ತು ಮಕ್ಕಳ ಸಮಸ್ಯೆಗಳನ್ನು ಆಲಿಸಲಿದ್ದಾರೆ. ಕೌಟುಂಬಿಕ ದೌರ್ಜನ್ಯದಂತಹ ಸೂಕ್ಷ್ಮ ವಿಷಯಗಳ ಬಗ್ಗೆ ಜಾಗೃತಿ ಮೂಡಿಸಿ, ಕಾನೂನಿನ ಅರಿವನ್ನು ಹೆಚ್ಚಿಸಲಿದ್ದಾರೆ. ಇದು ಸಂತ್ರಸ್ತರಿಗೆ ಮುಕ್ತವಾಗಿ ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಧೈರ್ಯ ತುಂಬುತ್ತದೆ.

ಪೊಲೀಸ್ ಸೇವೆಗಳಲ್ಲಿ ಸಾರ್ವಜನಿಕರ ಬೆಂಬಲ ಮತ್ತು ಸಹಭಾಗಿತ್ವ ಅತ್ಯಗತ್ಯ. ಈ ಉದ್ದೇಶದಿಂದ, ಈಗಾಗಲೇ ಪ್ರತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಬ್-ಬೀಟ್‌ಗಳನ್ನು ರಚಿಸಿ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ.

ಇನ್ನು ಮುಂದೆ, ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಮನೆ ಮನೆಗೆ ಭೇಟಿ ನೀಡಿ, ಜನರ ದೂರುಗಳನ್ನು ಆಲಿಸಿ, ಕಾನೂನು ಚೌಕಟ್ಟಿನಲ್ಲಿ ಪರಿಹಾರ ನೀಡಲು ಪ್ರಯತ್ನಿಸಲಿದ್ದಾರೆ.

ಇದು ಸಮಾಜದಲ್ಲಿ ನಿರ್ಭಯ ವಾತಾವರಣವನ್ನು ಸೃಷ್ಟಿಸಲು ಸಹಕಾರಿಯಾಗಿದೆ.

ಸಾರ್ವಜನಿಕರು ಯಾವುದೇ ಅಂಜಿಕೆಯಿಲ್ಲದೆ, ಮುಕ್ತ ಮನಸ್ಸಿನಿಂದ ತಮ್ಮ ಸಮಸ್ಯೆಗಳನ್ನು ಪೊಲೀಸರೊಂದಿಗೆ ಹಂಚಿಕೊಳ್ಳುವ ಮೂಲಕ ಈ ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ಯಶಸ್ವಿಗೊಳಿಸಬೇಕು. ಒಟ್ಟಾಗಿ ಸಾಗಿದರೆ ಮಾತ್ರ, ಹೆಚ್ಚು ಸುರಕ್ಷಿತ ಮತ್ತು ಸುವ್ಯವಸ್ಥಿತ ಸಮಾಜವನ್ನು ನಿರ್ಮಿಸಲು ಸಾಧ್ಯ.

### ಗದಗ ಜಿಲ್ಲೆಯ ಹೊಸ ಭಕ್ತಿ ಕೇಂದ್ರವಾಗುವತ್ತ ನೂತನ ಮಂತ್ರಾಲಯವು ಶಾಖಾ ಮಠ

# ಕಳಸಾಪುರದಲ್ಲಿ 'ಮಿನಿ ಮಂತ್ರಾಲಯ'



ನಮಗೂ ಒಂದು ಮಿನಿ ಮಂತ್ರಾಲಯಬೇಕು ಎಂಬ ದಶಕಗಳ ಬೇಡಿಕೆಯ ನಂತರ ಗದಗಕ್ಕೆ ಕೊನೆಗೂ ಮಿನಿ ಮಂತ್ರಾಲಯ ದೊರೆತಿ-ದ್ದು, ಕಳೆದ ಕೆಲವು ದಿನಗಳಿಂದ ದೇವಾಲಯಕ್ಕೆ ಸಾವಿರಾರು ಭಕ್ತರು ಭೇಟಿ ನೀಡಿದ್ದಾರೆ. ಗದಗ ನಗರದ ಹತ್ತಿರ ಹಾಗೂ ಕಳಸಾಪುರ ಗ್ರಾಮದ ಬಳಿ ರಾಘವೇಂದ್ರಸ್ವಾಮಿ ಮಠವಿದ್ದು, ಈ ಜಾಗವು ತುಂಬಾ ವಿಶಾಲವಾಗಿದೆ. ಗದಗ ಜಿಲ್ಲೆಯ ಕಿರಟಗೇರಿ ಗ್ರಾಮಕ್ಕೆ ರಾಯರು ಭೇಟಿ ನೀಡಿದ್ದು, ಭಕ್ತರೊಬ್ಬರ ಮಗು ಮಾವಿನ ಹಣ್ಣಿನ ಸೀಕರಣೆಯಲ್ಲಿ ಬಿದ್ದು ಮೃತಪಟ್ಟಾಗ, ತಮ್ಮ ಪವಾಡದಿಂದ ಆ ಮಗುವನ್ನು ಬದುಕಿಸಿದ್ದು ಎಂತವರಿಗೂ ಮೈಯಲ್ಲಿ ರೋಮಾಂಚನ ಮೂಡಿಸುಸತ್ತದೆ.


ಆ ಸನ್ನಿವೇಶ ನಡೆದಿದ್ದು ಗದಗಿನ ಹತ್ತಿರವೇ ಎಂಬುದು ವಿಶೇಷ. ಅದರ ಜೊತೆಗೆ ಗದಗ ನಗರದ ಹತ್ತಿರವೇ ಬೃಹತ್ ಮಠ ಕಟ್ಟಲಾಗಿದ್ದು, ಸಕಲ ಸದ್ಭಕ್ತರಿಗೆ ಸಂತಸದ ವಿಷಯ. ಈ ಮಠವನ್ನು ಭಕ್ತರು ಮಿನಿ ಮಂತ್ರಾಲಯ ಅಥವಾ ಶಾಖಾ ಮಠ ಎಂದೇ ಕರೆಯುತ್ತಾರೆ ಮತ್ತು ಮಠದ ಆವರಣದಲ್ಲಿ ಉದ್ಯಾನವನ ನಿರ್ಮಾಣಕ್ಕಾಗಿ ಉದ್ದೇಶಿಸಲಾಗಿದೆ. ಗದಗ ಪಟ್ಟಣದಿಂದ ಕೇವಲ ಮೂರು ಕಿ.ಮೀ ದೂರದಲ್ಲಿರುವ ಕಳಸಾಪುರ ಗ್ರಾಮದ ಹೊರವಲಯದಲ್ಲಿ ಶ್ರೀನಿವಾಸ ಶಿರಹಟ್ಟಿ ಮತ್ತು ಸಹೋದರರು ಏಳು ನಿವೇಶನಗಳನ್ನು ದಾನ ಮಾಡಿದ್ದಾರೆ ಹಾಗೂ ಮಂತ್ರಾಲಯ ಮೂಲ ಮಠವು ಇದಕ್ಕೆ ಸಹಕಾರ ನೀಡಿದೆ.

ಈ ಮಠದ ವಿಶೇಷತೆಗಳೆಂದರೆ, 1903ರಿಂದ ಇಲ್ಲಿಯವರೆಗಿನ ಮಂತ್ರಾಲಯ ಮಠದ ಎಲ್ಲಾ ಪೀಠಾಧಿಪತಿಗಳ ಹಳೆಯ ಛಾಯಾಚಿತ್ರಗಳು. ಮಂತ್ರಾಲಯದಲ್ಲಿ ರಾಘವೇಂದ್ರ ಸ್ವಾಮಿಗಳ ಫೋಟೋಗಳನ್ನು ಪ್ರದರ್ಶಿಸುವ ಎಲ್ಲಾ ಪೀಠಾಧಿಪತಿಗಳ ಛಾಯಾಚಿತ್ರಗಳನ್ನು ಈ ಮಿನಿ ಮಂತ್ರಾಲಯದಲ್ಲಿ ಇಲಿ ಕಾಣಬಹುದು. ಈ ಮಠದಲ್ಲಿ, ಭಕ್ತರು ಜೀವನ ಚರಿತ್ರೆಯ ವಿವರಗಳೊಂದಿಗೆ ರಾಘವೇಂದ್ರ ಸ್ವಾಮಿಗಳ ದೊಡ್ಡ ಫಲಕವನ್ನು ನೋಡಬಹುದು. ರಾಘವೇಂದ್ರ ಸ್ವಾಮಿಗಳು 1671ರ ಶ್ರಾವಣ ಶುಕ್ರವಾರದಂದು ತುಂಗಭದ್ರಾ ಜಲಾನಯನ ಪ್ರದೇಶದ ಬಳಿ ಬೃಂದಾವನವನ್ನು ಪ್ರವೇಶಿಸಿದರು ಎಂದೂ ಉಲ್ಲೇಖಿಸಲಾಗಿದೆ.

ನಮ್ಮ ಗ್ರಾಮದಲ್ಲಿ ಶಾಖಾ ಮಠವನ್ನು ಸ್ಥಾಪಿಸಿದ್ದಕ್ಕಾಗಿ ನಾವು ಮಂತ್ರಾಲಯದ ಆಡಳಿತ ಮತ್ತು ಸುಬುಧೇಂದ್ರತೀರ್ಥ ಮಠಾಧೀಶರಿಗೆ ಕೃತಜ್ಞರಾಗಿರುತ್ತೇವೆ. ಮಠದ ಉದ್ಘಾಟನೆ ಇತ್ತೀಚೆಗೆ ವಿಜೃಂಭಣೆಯಿಂದ ನಡೆಯಿತು. ಗುರುವಾರ ಮತ್ತು ಭಾನುವಾರದಂದು ಅಪಾರ ಭಕ್ತರ ಆಗಮನ ನೋಡಿ ನಮಗೆ ಸಂತೋಷವಾಗಿದೆ ಎನ್ನುತ್ತಾರೆ ಸಾಮಾಜಿಕ ಕಾರ್ಯಕರ್ತ ಮತ್ತು ಕಳಸಾಪುರದ ಹಿರಿಯರಾದ ಶರದರಾವ್ ಹುಯಿಲಗೋಳ.

ನಮ್ಮ ಗ್ರಾಮದಲ್ಲಿ ಈಗ ಮಿನಿ ಮಂತ್ರಾಲಯವಿದೆ ಮತ್ತು ಶೀಘ್ರದಲ್ಲೇ ಮಠದ ಮುಂದೆ ಸುಂದರವಾದ ಉದ್ಯಾನವನ ಬರಲಿದೆ ಎನ್ನುತ್ತಾರೆ ಕಳಸಾಪುರ ಗ್ರಾಮದ ಕನ್ನಡ ಅಜ್ಜ ಎಂದೇ ಖ್ಯಾತಿ ಹೊಂದಿರುವ ಮಲ್ಲಿಕಾರ್ಜುನ ಖಂಡೆಮ್ಮನವರ.

ರಾಘವೇಂದ್ರ ಸ್ವಾಮಿಯ ಭಕ್ತರಾದ ಬೆಟಗೇರಿಯ ಶ್ರೀನಿವಾಸ ಹುಬ್ಬಳ್ಳಿ ಅವರು, ರಾಘವೇಂದ್ರ ಸ್ವಾಮಿ ಮಠವು ಗದಗ ಹತ್ತಿರ ಕಳಸಾಪುರ ಗ್ರಾಮದ ಹತ್ತಿರ ಭವ್ಯವಾಗಿ ಕಟ್ಟಲ್ಪಟ್ಟಿದ್ದು, ಈ ಕಾರ್ಯಕ್ಕೆ ಮುಂದಾದ ಎಲ್ಲ ಸದ್ಭಕ್ತರಿಗೂ ಗುರು ರಾಘವೇಂದ್ರರು ಒಳ್ಳೆಯದನ್ನು ಮಾಡಲಿ ಹಾಗೂ ರಿಂಗ್ ರೋಡಿನಲ್ಲಿ ಸಂಚರಿಸುವ ಪ್ರಯಾಣಿಕರೂ ಮಠದ ಬಗ್ಗೆ ತಿಳಿಯುವಂತೆ ಫಲಕಗಳನ್ನು ಹಾಕಿ ಅನುಕೂಲ ಕಲ್ಪಿಸಲು ವಿನಂತಿಸುತ್ತಾರೆ.



**– ರಘೋತ್ತಮ ಕೊಪ್ಪರ, ಪತ್ರಕರ್ತರು, ಪಾರಂಪರಿಕ ವೈದ್ಯರು. ಗದಗ.**

## ದರ್ಶನ್ ಗೆ ಜಾಮೀನು ನೀಡುವಾಗ ಹೈಕೋರ್ಟ್ ಸೂಕ್ತವಾಗಿ ವಿವೇಚನೆ ಬಳಸಿಲ್ಲ: ನ್ಯಾ. ಪರ್ದಿವಾಲಾ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್‌ಗೆ ಹೈಕೋರ್ಟ್ ಜಾಮೀನು ನೀಡಿದೆ. ಸದ್ಯ ದರ್ಶನ್ ಡೆವಿಲ್ ಸಿನಿಮಾದ ಶೂಟಿಂಗ್‌ಗಾಗಿ ಥಾಯ್ಲೆಂಡ್ ಗೆ ತೆರಳಿದ್ದಾರೆ. ಈ ಮಧ್ಯೆ ದರ್ಶನ್ ಗೆ ಹೈಕೋರ್ಟ್ ನೀಡಿರುವ ಜಾಮೀನನ್ನು ಪ್ರಶ್ನಿಸಿ ರಾಜ್ಯ ಪೊಲೀಸ್ ಇಲಾಖೆ ಸುಪ್ರೀಂ ಕೋರ್ಟ್ ಮೆಟ್ಟಿಲೇರಿತ್ತು. ಅದರ ವಿಚಾರಣೆ ಗುರುವಾರ ನಡೆಯಿತು. ಜಸ್ಟೀಸ್ ಜೆ.ಬಿ.ಪರ್ದಿವಾಲಾ ಅವರ ಪೀಠದಲ್ಲಿ ಈ ಅರ್ಜಿಯ ವಿಚಾರಣೆ ನಡೆಯಿತು.

## ಗ್ಯಾರಂಟಿ ಯೋಜನೆಗಳನ್ನು ಟೀಕಿಸುತ್ತಿದ್ದ ಬಿಜೆಪಿ ಬಿಹಾರದಲ್ಲಿ ನಮ್ಮನ್ನು ಅನುಸರಿಸುತ್ತಿದೆ: ಡಿಕೆಶಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಗ್ಯಾರಂಟಿ ಯೋಜನೆಗಳನ್ನು ಟೀಕಿಸುತ್ತಿದ್ದ ಬಿಜೆಪಿ ಬಿಹಾರದಲ್ಲಿ ನಮ್ಮನ್ನು ಅನುಸರಿಸುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಕರ್ನಾಟದಲ್ಲಿ ಕಾಂಗ್ರೆಸ್ ಸರ್ಕಾರ ಜನರಿಗೆ ನೀಡುತ್ತಿರುವ ಗ್ಯಾರಂಟಿ ಯೋಜನೆಗಳನ್ನು ಟೀಕಿಸುವ ಬಿಜೆಪಿ ಈಗ ಕರ್ನಾಟಕ ಮಾದರಿಯನ್ನು ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಅನುಸರಿಸುತ್ತಿದೆ ಎಂದು ಹೇಳಿದರು.

ಕೇವಲ ಬಿಹಾರ ಮಾತ್ರವಲ್ಲ, ಕರ್ನಾಟಕದಲ್ಲಿ ಅಸೆಂಬ್ಲಿ ಚುನಾವಣೆಯ ನಂತರ ಯಾವ್ಯಾವ ರಾಜ್ಯಗಳಲ್ಲಿ ಚುನಾವಣೆ ನಡೆದಿದೆಯೋ ಅಲ್ಲೆಲ್ಲ ಬಿಜೆಪಿ ಕರ್ನಾಟಕದ ಉದಾಹರಣೆಯನ್ನು ಫಾಲೋ ಮಾಡಿದೆ. ಹರಿಯಾಣ, ರಾಜಸ್ತಾನ, ದೆಹಲಿ, ಮಧ್ಯಪ್ರದೇಶ, ಮಹಾರಾಷ್ಟ್ರ ಮೊದಲಾದ ರಾಜ್ಯಗಳಲ್ಲಿ ಬಿಜೆಪಿ ಇದನ್ನೇ ಮಾಡಿದ್ದು ಎಂದು ಡಿಕೆ ಶಿವಕುಮಾರ್ ಹೇಳಿದರು.

# ಗಣತಿದಾರರಿಗೆ ಗೌರವಧನ ಮಂಜೂರು ಮಾಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪರಿಶಿಷ್ಟ ಜಾತಿ ಗಣತಿ ಮಾಡಿದ ಗಣತಿದಾರರಿಗೆ ಹಾಗೂ ಮೇಲ್ವಿಚಾರಕರಿಗೆ ಗೌರವಧನ ಹಾಗೂ ಗಳಿಕೆ ರಜೆ ಮಂಜೂರಿಗಾಗಿ ಗುರುವಾರ ಪಟ್ಟಣದಲ್ಲಿ ತಹಸೀಲ್ದಾರ ಧನಂಜಯ ಎಮ್ ಅವರಿಗೆ ಸರಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ತಾಲೂಕು ಘಟಕದ ವತಿಯಿಂದ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಅಧ್ಯಕ್ಷ ಆನಂದಕುಮಾರ ಮುಳಗುಂದ,




ಉಪಾಧ್ಯಕ್ಷ ಹಾಶೀಮ್ ಗುತ್ತಲ, ಖಜಾಂಚಿ ಶೇಖಪ್ಪ ಲಮಾಣಿ, ಮುಖ್ಯೋಪಾಧ್ಯಾಯ ಬಸವರಾಜ ಪಟ್ಟೇದ, ಬಸವರಾಜ ಗಾಯಕವಾಡ, ಸಂಘದ ಪದಾಧಿಕಾರಿಗಳಾದ ಸುಣಗಾರ, ಅಂಗಡಿ, ಹಿರೇಮಠ, ಸಹಶಿಕ್ಷಕರಾದ ಸಂತೋಷ ರಾಠೋಡ, ನದಾಫ್, ದಿಂಡವಾಡ, ಮಿಯಾನವರ ಹಾಜರಿದ್ದರು.

### ಆಷಾಢ ಮಾಸದ ಇಷ್ಟಲಿಂಗ ಮಹಾಪೂಜಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ನೈತಿಕ ನಿಯಮಗಳು ಎಂದಿಗೂ ಶಾಶ್ವತ

■ ವಿಜಯಸಾಕ್ಷಿ ಸುದ್ದಿ, ಹರಿಹರ

ಬದುಕು ಭಗವಂತ ಕೊಟ್ಟ ಅಮೂಲ್ಯವಾದ ಸಂಪತ್ತು. ಸತ್ಯ, ಶಾಂತಿ, ಸಾಮರಸ್ಯ, ಸದ್ಭಾವನೆಗಳನ್ನು ಹೊಂದಿ ಬಾಳಬೇಕು. ಭೌತಿ-ಕ ಜೀವನ ಸಮೃದ್ಧಗೊಂಡರೆ ಸಾಲದು, ಅದರೊಂದಿಗೆ ಆಂತರಿಕ ಬದುಕು ಪರಿಶುದ್ಧಗೊಳ್ಳಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ನಗರದ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರ ಹಳೇಪೇಟೆ ಶ್ರೀ ಬಸವೇಶ್ವರ ದೇವಸ್ಥಾನದ ಸಭಾಂಗಣದಲ್ಲಿ ಜರುಗಿದ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ದೈಹಿಕ ಬೆಳವಣಿಗೆಗೆ ಆಹಾರ ನೀರು ಮುಖ್ಯವಾಗಿರುವಂತೆ ಬದುಕಿನ ವಿಕಾಸಕ್ಕೆ ಮತ್ತು ಅಭಿವೃದ್ಧಿಗೆ ಧರ್ಮಾಚರಣೆ ಅಗತ್ಯವಾಗಿದೆ. ವ್ಯಕ್ತಿ ಜೀವನದಲ್ಲಿ ಸಂಪತ್ತು ಗಳಿಸದಿದ್ದರೂ ಪರವಾಗಿಲ್ಲ. ಆದರೆ ಸದ್ಗುಣಗಳನ್ನು ಸಂಪಾದಿಸಿಕೊಂಡು ಬಾಳಬೇಕು. ಸಾಮಾಜಿಕ ಸಂಪ್ರದಾಯಗಳು ಬದಲಾಗಬಹುದು. ಆದರೆ ನೈತಿಕ ನಿಯಮಗಳು ಯಾವಾಗಲೂ ಶಾಶ್ವತವಾಗಿರುತ್ತವೆ. ವೀರಶೈವ ಧರ್ಮದಲ್ಲಿ ಜ್ಞಾನ ಕ್ರಿಯೆ ಮತ್ತು ಸಾಮಾಜಿಕ ಚಿಂತನೆಗಳಿಗೆ ಆದ್ಯತೆ ಕೊಟ್ಟಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಶಿವಾದ್ವೈತ ತತ್ವ ಸಿದ್ಧಾಂತದ ಚಿಂತನಗಳು ಜೀವಾತ್ಮ ಪರಮಾತ್ಮನಾಗಲು ಬೇಕಾದ ಸಾಧನಾ ಮಾರ್ಗದ ಅರಿವನ್ನು ಉಂಟು ಮಾಡುತ್ತವೆ ಎಂದರು.




ನೇತೃತ್ವ ವಹಿಸಿದ ಹಂಪಸಾಗರ ನವಲಿ ಹಿರೇಮಠದ ಅಭಿನವ ಶಿವಲಿಂಗರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ವಿಚಾರ ವಿಮರ್ಶೆಗಳು ಸಂಸ್ಕೃತಿಯ ಮೇಲೆ ಬೆಳಕು ಮೂಡಿಸಬೇಕೇ ವಿನಃ ಜನರನ್ನು ನಾಸ್ತಿಕರನ್ನಾಗಿ ಮಾಡಬಾರದು. ಸಮಾಜದಲ್ಲಿ ಸಂಘಟನೆಗಳು ನಡೆಯಬೇಕಲ್ಲದೆ ಸಂಘರ್ಷಗಳು ನಡೆಯಬಾರದು. ಅಧರ್ಮದ ಕವಚ ಹೊತ್ತ ವಿಚಾರಗಳು ಬಹಳ ಕಾಲ ಉಳಿಯಲಾರವು ಎಂದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಮಾಜಿ ಶಾಸಕ ಹೆಚ್. ಎಸ್. ಶಿವಶಂಕರ್ ಮಾತನಾಡಿ, ವೀರಶೈವ ಧರ್ಮದ ಮೂಲ ಪೀಠಗಳು ಪಂಚ ಪೀಠಗಳು. ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳನ್ನು ಎತ್ತಿ ಹಿಡಿದ ಶ್ರೇಯಸ್ಸು ಇವರಿಗೆ ಸಲ್ಲುತ್ತದೆ. ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರು ಪೂಜಾ ವೈಭವ ಕಂಡವರು ನಾವು. ಶ್ರೀ ರಂಭಾಪುರಿ ಜಗದ್ಗುರುಗಳ ಪೂಜಾ ಸಂದರ್ಭದಲ್ಲಿ ಕೈಲಾಸದಲ್ಲಿದ್ದ ಅನುಭವ ಆಗುತ್ತಿದೆ. ಸಮಾಜ ಮತ್ತು ಸಂಸ್ಕೃತಿ ಕಟ್ಟಿ ಬೆಳೆಸುವಲ್ಲಿ ಬಹಳ ಶ್ರಮ ವಹಿಸಿ ಧರ್ಮ ಜಾಗೃತಿ ಮಾಡುತ್ತಿದ್ದಾರೆ ಎಂದರು. ಅವಧೂತ ಕವಿ ಗುರುರಾಜ ಗುರೂಜಿ ಮಾತನಾಡಿ, ಸಂಪತ್ತು ಬೆಳೆದಂತೆ ಮಾನವೀಯ ಸಂಬಂಧಗಳು ಸಡಿಲಗೊಳ್ಳಬಾರದು. ಮನುಷ್ಯನಲ್ಲಿ ಮಾನವೀಯತೆ ಕರುಣೆ ಮತ್ತು ಪರೋಪಕಾರ ಮನೋಭಾವನೆಗಳು ಬೆಳೆಯಬೇಕು. ಬದುಕಿನ ಶ್ರೇಯಸ್ಸಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಒಂದಿಷ್ಟಾದರೂ ಶಿವಜ್ಞಾನದ ಅರಿವು ಮುಖ್ಯವೆಂದರು.

ಮುಖ್ಯ ಅತಿಥಿಗಳಾಗಿ ಹರಿಹರದ ಅ.ಭಾ.ವೀ.ಮ ಅಧ್ಯಕ್ಷ ಡಿ.ಜಿ.ಶಿವಾನಂದಪ್ಪ, ನಗರಸಭೆ ಮಾಜಿ ಸದಸ್ಯ ಡಿ. ಹೇಮಂತರಾಜ್, ಜವಳಿ ಸಮಾಜದ ಅಧ್ಯಕ್ಷ ಕೊಂಡಜ್ಜಿ ಈಶ್ವರಪ್ಪ ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಗಿರೀಶ ಹೆಗ್ಗಪ್ಪನವರ, ಮಲ್ಲಪ್ಪ ಹೆಗ್ಗಪ್ಪನವರ, ಅಣ್ಣಪ್ಪ ಪೂಜಾರ, ನಾಗರಾಜ ಚಕ್ರಸಾಲಿ, ಹೆಚ್. ಎಂ. ಶಿವಕುಮಾರಸ್ವಾಮಿ. ಟಿ.ಜೆ. ಮುರುಗೇಶಪ್ಪನವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು.

ಸೃಷ್ಟಿ ಅವರಿಂದ ಯೋಗ ಪ್ರದರ್ಶನ ಜರುಗಿತು. ಐಶ್ವರ್ಯ ಸ್ವಾಗತಿಸಿದರು. ಶಿಕ್ಷಕ ವಿ.ಬಿ. ಕೊಟ್ರೇಶ ನಿರೂಪಿಸಿದರು. ಕಾಂತರಾಜ ಮತ್ತು ವೀರೇಶ್ ಸಂಗಡಿಗರಿಂದ ಭಕ್ತಿ ಗೀತೆ ಜರುಗಿತು. ' ಹೆಚ್.ಎಂ. ಸೋಮನಾಥಯ್ಯ ಸಹೋದರರು ಪ್ರಸಾದ ಸೇವೆ ಸಲ್ಲಿಸಿದರು.

# ಅತ್ಯುತ್ತಮ ಇಲಾಖೆ ಮುಖ್ಯಸ್ಥ ಪುರಸ್ಕಾರ




■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಕೇಂದ್ರ ಕಛೇರಿ ಹುಬ್ಬಳ್ಳಿಯಲ್ಲಿ, ಮುಖ್ಯ ಕಾನೂನು ಅಧಿಕಾರಿಗಳಾದ (ಪ್ರಭಾರಿ) ಎಂ.ಸುನೀಲ್ ಇವರಿಗೆ 2025ನೇ ಸಾಲಿನ ಜೂನ್ ಮಾಹೆಯಲ್ಲಿ ಅತ್ಯುತ್ತಮ ಕಾರ್ಯನಿರ್ವಹಣೆಗಾಗಿ ಮತ್ತು ಅವರ ಸೇವೆಯನ್ನು ಗುರುತಿಸಿ ಅತ್ಯುತ್ತಮ ಇಲಾಖೆ ಮುಖ್ಯಸ್ಥರೆಂದು ಪ್ರಶಂಶಿಸಿ ನಗದು ಪುರಸ್ಕಾರ, ಟ್ರೋಫಿ ಹಾಗೂ ಪ್ರಶಸ್ತಿ ಪತ್ರವನ್ನು ನೀಡಿ ಪುರಸ್ಕರಿಸಲಾಯಿತು. ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ ಪ್ರಶಸ್ತಿ ಪ್ರದಾನ ಮಾಡಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಕೇಂದ್ರ ಕಛೇರಿಯ ಇಲಾಖಾ ಮುಖ್ಯಸ್ಥರುಗಳಾದ ಪಿ.ವೈ. ನಾಯಕ್, ಗಣೇಶ ರಾಠೋಡ, ಬಿ. ಬೋರಯ್ಯ, ಸಿದ್ದೇಶ್ವರ ಹೆಬ್ಬಾಳ, ಶಶೀಧರ ಕುಂಬಾರ, ಜಗದಂಬಾ ಕೋಪರ್ಡೆ, ಇಮಾಮ ಕಾಸೀಮ್ ಕಂದಗಲ್, ಶ್ರೀನಿವಾಸಮೂರ್ತಿ, ಕೆ.ಎಲ್. ಗುಡೆನ್ನವರ, ಜಿ. ಶ್ರೀನಾಥ, ಎಂ.ಬಿ. ಕಪಲಿ, ಅಧಿಕಾರಿಗಳಾದ ದಯಾನಂದ ಪಾಟೀಲ್ ಉಪಸ್ಥಿತರಿದ್ದರು.



ಬಾಗಲಕೋಟ: ಜಿಲ್ಲೆಯ ಬಾದಾಮಿಗೆ ಆಗಮಿಸಿದ್ದ ಜೆಡಿಎಸ್ ಪಕ್ಷದ ಯುವ ಘಟಕದ ರಾಜ್ಯ ಅಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರನ್ನು ಜೆಡಿಎಸ್ ಪಕ್ಷದ ರಾಜ್ಯ ವಕ್ತಾರ ವೆಂಕನಗೌಡ ಆರ್ ಗೋವಿಂದಗೌಡ್ರು ಭೇಟಿ ಮಾಡಿ ಗದಗ ಜಿಲ್ಲೆಯಲ್ಲಿ ಪಕ್ಷದ ಸಂಘಟನೆಯ ಬಗ್ಗೆ ಚರ್ಚಿಸಿ ಮುಂಬರುವ ದಿನಗಳಲ್ಲಿ ಗದಗ ಮತಕ್ಷೇತ್ರದಲ್ಲಿ ಜನರೊಂದಿಗೆ ಜನತಾದಳ ಕಾರ್ಯಕ್ರಮದ ಆಯೋಜನೆ ಕುರಿತು ಚರ್ಚಿಸಿದರು.

# ಸರ್ಕಾರ ಸದಾ ಕನ್ನಡದ ಸಾಹಿತ್ಯ, ಸಂಸ್ಕೃತಿಯ ಪರವಾಗಿ ಕೆಲಸ ಮಾಡುತ್ತೆ: ಸಿದ್ದರಾಮಯ್ಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಮ್ಮ ಸರ್ಕಾರ ಸದಾ ಕನ್ನಡದ ಸಾಹಿತ್ಯ, ಸಂಸ್ಕೃತಿಯ ಪರವಾಗಿ ಕೆಲಸ ಮಾಡುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ 2024-25ನೇ ಸಾಲಿನ ಜೀವಮಾನ ಸಾಧನೆಯ ವಿವಿಧ ಪ್ರಶಸ್ತಿಗಳನ್ನು ವಿತರಿಸಿ, ಪ್ರಶಸ್ತಿ ಪುರಸ್ಕೃತರನ್ನು ಅಭಿನಂದಿಸಿ ಮಾತನಾಡಿದರು.

ಪ್ರಶಸ್ತಿಗಳನ್ನು ನಿರೀಕ್ಷಿಸದೇ ತಮ್ಮ ತಮ್ಮ ಕ್ಷೇತ್ರದಲ್ಲಿ ಸಾಧನೆ ಮಾಡಿದವರನ್ನು ಗುರುತಿಸಿ ಪ್ರಶಸ್ತಿಗಳನ್ನು ನೀಡುವ ಕೆಲಸವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಾಡುತ್ತಿದೆ. ಇದರ ಅಂಗವಾಗಿ 18 ಮಂದಿ ಸಾಧಕರಿಗೆ ಪ್ರಶಸ್ತಿ ನೀಡಿದ್ದೇವೆ.




ಇದರಲ್ಲಿ ಮೂರು ಪ್ರಶಸ್ತಿಗೆ 10 ಲಕ್ಷ ರೂಪಾಯಿ ನೀಡಲಾಗುತ್ತಿದೆ, ಉಳಿದ ಪ್ರಶಸ್ತಿಗಳಿಗೆ 5 ಲಕ್ಷ ರೂಪಾಯಿ ನೀಡಲಾಗುತ್ತಿದೆ. ಆದರೆ, ಪುರಸ್ಕೃತರ ಸಾಧನೆಗೆ ಈ ಹಣ ಸಮವಲ್ಲ. ಆದರೆ, ಇದು ಕನ್ನಡ ಸಂಸ್ಕೃತಿಯ ಕೆಲಸಕ್ಕೆ ಕೊಡುವ ಗೌರವ ಎಂದರು.

ಬಹಳ ಮಂದಿ ಸಂಸ್ಕೃತಿ ವಿಚಾರದಲ್ಲಿ ಸಾಧನೆ ಮಾಡುತ್ತಲೇ ಇರುತ್ತಾರೆ. 2000 ವರ್ಷಗಳ ಇತಿಹಾಸ ಇರುವ ಕನ್ನಡದ ಸಾಂಸ್ಕೃತಿಕ ಸಂಪತ್ತು ಇಡೀ ವಿಶ್ವಕ್ಕೆ ಮಾದರಿಯಾಗಿದೆ ಎಂದರು.

ಕನ್ನಡ ಸಂಸ್ಕೃತಿ, ಸಾಹಿತ್ಯದ ಕೆಲಸದಲ್ಲಿ ನಮ್ಮ ಸರ್ಕಾರ ಹಿಂದೆ ಬೀಳುವುದಿಲ್ಲ. ಇನ್ನೂ ಹೆಚ್ಚಿನ ಪ್ರೋತ್ಸಾಹ ಕೊಡುವ ಕೆಲಸವನ್ನು ನಾವು ಮಾಡುತ್ತೇವೆ ಎಂದರು.

ರಾಜ್ಯದ ಮೊದಲ ಕನ್ನಡ ಕಾವಲು ಸಮಿತಿಯ ಮೊದಲ ಅಧ್ಯಕ್ಷನಾಗಿದ್ದವನು ನಾನು. ನಾನು ಸಾಹಿತ್ಯದ ವಿದ್ಯಾರ್ಥಿ ಅಲ್ಲ. ಆದರೆ ಕನ್ನಡ ಸಾಹಿತ್ಯ, ಸಂಸ್ಕೃತಿಯನ್ನು ಅಪಾರವಾಗಿ ಪ್ರೀತಿಸುವವನು. ಕನ್ನಡ ಕರ್ನಾಟಕದಲ್ಲಿ ಸಾರ್ವಭೌಮ ಭಾಷೆ ಆಗಬೇಕು ಎನ್ನುವ ದಿಕ್ಕಿನಲ್ಲಿ ಬೇಷರತ್ ಬದ್ಧತೆ ಇಟ್ಟುಕೊಂಡು ನಾನು ಕಾವಲು ಸಮಿತಿಯ ಮೊದಲ ಅಧ್ಯಕ್ಷನಾಗಿ ಕೆಲಸ ಮಾಡಿದ್ದೇನೆ ಎಂದರು.

## ಅಪರ ಆಯುಕ್ತರಾಗಿ ಡಾ.ಈಶ್ವರ ಉಳ್ಳಾಗಡ್ಡಿ ವರ್ಗಾವಣೆ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಬೀದರ್ ಜಿಲ್ಲೆಯ ಅಪರ ಜಿಲ್ಲಾಧಿಕಾರಿಯಾಗಿದ್ದ ಡಾ.ಈಶ್ವರ ಉಳ್ಳಾಗಡ್ಡಿ ಅವರನ್ನು ಧಾರವಾಡ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರನ್ನಾಗಿ ನೇಮಿಸಿ ಸರಕಾರ ಆದೇಶ ಹೊರಡಿಸಿದೆ.

ಬೀದರ್ ಜಿಲ್ಲೆಯಲ್ಲಿ ಅಪರ ಜಿಲ್ಲಾಧಿಕಾರಿಯಾಗಿ ಪ್ರಾಮಾಣಿಕ ಸೇವೆ ಸಲ್ಲಿಸಿದ್ದ ಡಾ.ಈಶ್ವರ ಉಳ್ಳಾಗಡ್ಡಿ ಅವರನ್ನು ಧಾರವಾಡ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರನ್ನಾಗಿ ನೇಮಿಸಿದ ಸರಕಾರದ ಆದೇಶವನ್ನು ಗದಗ ಜಿಲ್ಲಾ ಯುಥ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರವಿ ಮೆಟಗುಡ್ಡ ಸ್ವಾಗತಿಸಿ, ಅಭಿನಂಧಿಸಿದ್ದಾರೆ.

### ಶಾಲಾ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಕೈತೊಳೆಯುವ ಪ್ರಾತ್ಯಕ್ಷಿತೆ ಕಾರ್ಯಕ್ರಮದಲ್ಲಿ ಆರ್.ವಿ. ಶೆಟ್ಟೆಪ್ಪನವರ

## ಸಮತೋಲಿತ ಆಹಾರದಿಂದ ಉತ್ತಮ ಆರೋಗ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳು ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಮತೋಲಿತ ಆಹಾರ, ನಿಯಮಿತ ವ್ಯಾಯಾಮ, ಹಿತ-ಮಿತ ನಿದ್ರೆ, ಒತ್ತಡ ನಿರ್ವಹಣೆ ಹಾಗೂ ಸ್ವಚ್ಛತೆ ಅವಶ್ಯವಾಗಿದೆ. ಮಕ್ಕಳು ಪ್ರತಿದಿನ ಶುಭ್ರ ಸ್ನಾನ, ಹಲ್ಲುಜ್ಜುವುದನ್ನು ಮಾಡುವುದರಿಂದ ಮನಸ್ಸು ಆನಂದ ಹಾಗೂ ಆರೋಗ್ಯದಿಂದ ಇರುತ್ತದೆ ಎಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟೆಪ್ಪನವರ ಹೇಳಿದರು.

ಅವರು ಗದಗ ಜಯೆಂಟ್ಸ್ ಗ್ರೂಪ್ಸ್ ಆಫ್ ಸಖಿ-ಸಹೇಲಿ ಸಂಘಟನೆಯಿಂದ ಗದುಗಿನ ರಾಜೀವ ಗಾಂಧಿ ನಗರದ ಸರ್ಕಾರಿ ಉರ್ದು ಶಾಲೆ ನಂ.4ರಲ್ಲಿ ಜರುಗಿದ 'ಉತ್ತಮ ಆರೋಗ್ಯ' ಜಾಗೃತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೈತೊಳೆಯುವ ವಿಧಾನವು ಅನೇಕ ರೋಗಗಳಿಂದ ದೂರವಿರಬಹುದಾದ ಸಾಧನವಾಗಿದೆ. ಮಕ್ಕಳು ಊಟಕ್ಕೆ ಮೊದಲು ಕೈಗಳನ್ನು ಸರಿಯಾದ ಕ್ರಮಾನುಸಾರ ಸಾಬೂನು ಉಪಯೋಗಿಸಿ ಕನಿಷ್ಠ 30 ಸೆಕೆಂಡು ತೊಳೆಯಬೇಕು. ಇದಕ್ಕಾಗಿ ಮಕ್ಕಳಿಗೆ ಶಾಲೆ ಹಾಗೂ ಮನೆಯಲ್ಲಿ ಮಾರ್ಗದರ್ಶನ ನೀಡಿ ಕೈ ತೊಳೆಯಲು ಪ್ರೋತ್ಸಾಹಿಸಬೇಕು. ಅಂದಾಗ ಮಕ್ಕಳು ಸರಿಯಾದ ಕ್ರಮದಲ್ಲಿ ಆರೋಗ್ಯ ಜಾಗೃತಿಯತ್ತ ಸಾಗುವರು ಎಂದರು.



ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ಬಾಲ್ಯವು ಪ್ರತಿಯೊಬ್ಬರ ಬದುಕಿನ ಮಧುರ ಕ್ಷಣ. ಬಾಲ್ಯದಲ್ಲಿಯೇ ಮಕ್ಕಳು ಸರಿಯಾದ ಜೀವನ ಕ್ರಮಗಳನ್ನು ರೂಢಿಸಿಕೊಳ್ಳಬೇಕು. ಶಾಲೆಯಲ್ಲಿ ಶಿಕ್ಷಕರು, ಮನೆಯಲ್ಲಿ ಪಾಲಕರು ಹೇಳುವ ಹಿತನುಡಿಗಳನ್ನು ಮಕ್ಕಳು ಕೇಳಿ ತಿಳಿದು ಅವರು ಹೇಳಿದಂತೆ ನಡೆದರೆ ಬದುಕು ಆರೋಗ್ಯಮಯವಾಗಿರುತ್ತದೆ ಎಂದರು.

ಗದಗ ಜಯೆಂಟ್ಸ್ ಗ್ರೂಪ್ಸ್ ಆಫ್ ಸಖಿ-ಸಹೇಲಿ ಸಂಘಟನೆ ಅಧ್ಯಕ್ಷೆ ಸುಮಾ ಪಾಟೀಲ ಮಾತನಾಡಿ, ನಮ್ಮ ಸಂಘಟನೆಯು ಸರ್ಕಾರಿ ಶಾಲಾ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯನ್ನೇ ಗುರಿಯಾಗಿಸಿಕೊಂಡಿದ್ದು, ಉತ್ತಮ ಆರೋಗ್ಯಕ್ಕಾಗಿ ಮಕ್ಕಳು ಸ್ವಚ್ಛತೆಯ ಕಡೆ ಹೆಚ್ಚು ಗಮನ ಕೊಡಬೇಕು. ಅದಕ್ಕಾಗಿ ಇಂದು ವೈದ್ಯರಿಂದ ಕೈತೊಳೆಯುವ ಹಾಗೂ ಆರೋಗ್ಯಕರ ಶೈಲಿಗಳ ಕುರಿತು ತಿಳುವಳಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಶಾಲಾ ಮುಖ್ಯೋಪಾಧ್ಯಾಯೆ ಖೈರುನ್ನಿಸ್ಸಾ ದಾವಲಖಾನವರ ಮಾತನಾಡಿ, ಸಂಘ-ಸಂಸ್ಥೆಗಳು ಸರ್ಕಾರಿ ಶಾಲೆಗಳಿಗೆ ಭೇಟಿ ನೀಡಿ ಮಕ್ಕಳ ಶೈಕ್ಷಣಿಕ ಹಾಗೂ ಆರೋಗ್ಯಕರ ಜೀವನಕ್ಕಾಗಿ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿರುವುದು ಅಭಿನಂದನೀಯ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ. ಮಹಾಂತೇಶ ಸಜ್ಜನರ ಮಾತನಾಡಿ, ಆರೋಗ್ಯವೆಂದರೆ ಸಂಪೂರ್ಣ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಸುಸ್ಥಿತಿಯಾಗಿದೆ. ಮಕ್ಕಳು ಸರಿಯಾಗಿ ಹಲ್ಲುಜ್ಜುವ ಕ್ರಮ, ಉತ್ತಮ ಜೀವನಶೈಲಿ ರೂಢಿಸಿಕೊಂಡು ಓದುವ ಸಮಯವನ್ನು ಸದ್ವಿನಿಯೋಗಪಡಿಸಿಕೊಂಡರೆ ಯಶಸ್ಸು ಸಾಧ್ಯ ಎಂದು ಹೇಳಿ, ಉತ್ತಮ ಆರೋಗ್ಯಕ್ಕಾಗಿ ಕೈತೊಳೆಯುವ ವಿಧಾನದ ಹಂತಗಳನ್ನು ಮಕ್ಕಳಿಗೆ ತಿಳಿಸಿದರು.

ರೇಖಾ ರೊಟ್ಟಿ ಪ್ರಾರ್ಥಿಸಿದರು. ಕಾರ್ಯದರ್ಶಿನಿ ಅಶ್ವಿನಿ ಮಾದಗುಂಡಿ ಸ್ವಾಗತಿಸಿದರು. ಚಂದ್ರಕಲಾ ಸ್ಥಾವರಮಠ ನಿರೂಪಿಸಿದರು. ಪ್ರಿಯಾಂಕಾ ಹಳ್ಳಿ ವಂದಿಸಿದರು. ಅನುರಾಧಾ ಅಮಾತ್ಯೆಗೌಡರ, ಪದ್ಮಾ ಕಬಾಡಿ, ಎನ್.ಎಚ್. ಜಕ್ಕಲಿ, ಐ.ಎ. ಗಾಡಗೋಳಿ, ಎಚ್.ಬಿ. ಮಕಾನದಾರ, ಎಸ್.ಎಸ್. ಬಳ್ಳಾರಿ, ಬಸವಣ್ಣೆವ್ವ ಮುಳ್ಳಾಳ, ಸಾವಿತ್ರಿ ಪಿಳ್ಳೆ, ಗೀತಾ ಮಹಾಕಾಳಿಮಠ, ಅರುಣಾ ಬನ್ನಿಗೋಳ ಸೇರಿದಂತೆ ಪಾಲಕ-ಪೋಷಕರು ಉಪಸ್ಥಿತರಿದ್ದರು.

## ಸಾಧಕರಿಗೆ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಗದಗ ಸೆಂಟ್ರಲ್ ವತಿಯಿಂದ 2025-26ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಸಾರ್ವಜನಿಕ ಸೇವೆಯನ್ನು ಗುರುತಿಸಿ ತಿಪ್ಪಣ್ಣ ಹನುಮಪ್ಪ ಗಂಗಪ್ಪನವರ, ಬಸನಗೌಡ ಶರಣಪ್ಪಗೌಡ ಸಾನಬಾಳ ಇವರನ್ನು ಪ್ರಶಂಸಾ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಪ.ಪೂ. ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಡಿಆರ್‌ಎಫ್ ಸಿಪಿಡಿಜಿ ರೊ. ಗಣೇಶ ಭಟ್, ಅಧ್ಯಕ್ಷ ರೊ. ಚೇತನ ಅಂಗಡಿ, ಕಾರ್ಯದರ್ಶಿ ರೊ. ರಾಜು ಉಮನಾಬಾದಿ, ಖಜಾಂಚಿ ರೊ. ಡಾ.ಪ್ರಭು ಗಂಜಿಹಾಳ, ಅಸಿಸ್ಟಂಟ್ ಗವರ್ನರ್ ರೊ. ವಿ.ಕೆ. ಗುರುಮಠ ಹಾಗೂ ನೂತನ ಪದಾಧಿಕಾರಿಗಳು ಉಪಸ್ಥಿತರಿದ್ದರು.

### ರೋಟರಿ ಗದಗ ಸೆಂಟ್ರಲ್ ಪದಾಧಿಕಾರಿಗಳಿಗೆ ಪದಗ್ರಹಣ ಸಮಾರಂಭ

## ನೂತನ ಪದಾಧಿಕಾರಿಗಳಿಗೆ ಸೇವಾದೀಕ್ಷೆ

■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಗದಗ ಸೆಂಟ್ರಲ್ ವತಿಯಿಂದ 2025-26ನೇ ಸಾಲಿನ ನೂತನ ಪದಾಧಿಕಾರಿಗಳಿಗೆ ಪದಗ್ರಹಣ ಸಮಾರಂಭವು ಸೇವಾಲಾಲ ನಗರದ ರೋಟರಿ ಭವನದಲ್ಲಿ ಜರುಗಿತು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಪರಮಪೂಜ್ಯ ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ವಹಿಸಿದ್ದರು. ಡಿಆರ್‌ಎಫ್‌ಸಿ ಪಿಡಿಜಿ ರೊ. ಗಣೇಶ ಭಟ್ ನೂತನ ಪದಾಧಿಕಾರಿಗಳಿಗೆ ಸೇವಾದೀಕ್ಷೆ ನೆರವೇರಿಸಿದರು. ಅಸಿಸ್ಟಂಟ್ ಗವರ್ನರ್ ರೊ. ವಿ.ಕೆ. ಗುರುಮಠ ಮಾತನಾಡಿದರು.



ಅಧ್ಯಕ್ಷ-ರೊ. ಚೇತನ ಅಂಗಡಿ, ಕಾರ್ಯದರ್ಶಿ-ರೊ. ರಾಜು ಉಮನಾಬಾದಿ, ಖಜಾಂಚಿ ರೊ. ಡಾ.ಪ್ರಭು ಗಂಜಿಹಾಳ, ಉಪಾಧ್ಯಕ್ಷ- ರೊ. ಟಿ.ಎಸ್. ಪಾಟೀಲ, ಐಪಿಪಿ ರೊ. ಆರ್.ಬಿ. ದಾನಪ್ಪಗೌಡರ, ಪ್ರೆಸಿಡೆಂಟ್ ಎಲೆಟ್ ರೊ. ಮಧುಸೂಧನ ಪುಣೇಕರ, ಸಾರ್ಜಂಟ್ ಅಟ್ ಆರ್ಮ್ಸ್ ರೊ. ಈಶಣ್ಣ ಗದ್ದಿಕೇರಿ ಸೇವಾದೀಕ್ಷೆ ಸ್ವೀಕರಿಸಿದರು.

ನಿರ್ದೇಶಕ ಮಂಡಳಿಯಲ್ಲಿ -ಕ್ಲಬ್ ಸೇವೆ ರೊ. ಪ್ರಕಾಶ ಉಗಲಾಟದ, ವೃತ್ತಿಪರ ಸೇವೆ ರೊ. ಮಂಜುನಾಥ ಬೇಲೇರಿ, ಸಮುದಾಯ ಸೇವೆ ರೊ. ಮುರುಗೇಶ ಬಡ್ನಿ, ಅಂತಾರಾಷ್ಟ್ರೀಯ ಸೇವೆ ರೊ. ಮಲ್ಲಿಕಾರ್ಜುನ ಐಲಿ, ಯುವಸೇವೆ ರೊ. ರಾಜು ಕಂಟಿಗೊಣ್ಣನವರ, ಸ್ಥಾಯಿ ಸಮಿತಿಯಲ್ಲಿ-ಆಡಳಿತ ರೊ. ಡಾ. ಸಿ.ಬಿ. ಹಿರೇಗೌಡ್ರ, ಸೇವಾಯೋಜನೆ ರೊ. ಎಸ್. ಆಯ್. ಅಣ್ಣಿಗೇರಿ, ಸದಸ್ಯತ್ವ ರೊ. ಎಸ್.ಸಿ. ಲಕ್ಕುಂಡಿ, ಪಿಆರ್‌ಓ ಮತ್ತು ಬುಲೆಟಿನ್ ರೊ. ಹೆಚ್.ವಿ. ಶೆಟ್ಟಿ, ಕ್ಲಬ್ ತರಬೇತುದಾರರು ರೊ. ಡಾ. ವಿ.ಸಿ. ಶಿರೋಳ, ರೋಟರಿ ಫೌಂಡೇಶನ್ ರೊ. ಶರಣಬಸಪ್ಪ ಗುಡಿಮನಿ, ಪೋಲಿಯೊ ಪಲ್ಸ್ ರೊ. ಸಂತೋಷ ತೋಟಗಂಟಿಮಠ, ಆರ್‌ಸಿಸಿ/ಐಸಿಸಿ ರೊ. ಸಿ.ಜಿ. ಹಿರೇಗೌಡ್ರ, ಕ್ಲಬ್ ಇತಿಹಾಸಕಾರ ರೊ. ಮಲ್ಲಿಕಾರ್ಜುನ ಚಂದಪ್ಪನವರ, ಸೋಶಿಯಲ್ ಮತ್ತು ಕಲ್ಚರಲ್ ರೊ. ವಿಜಯಕುಮಾರ ಹಿರೇಮಠ, ಸ್ಪೋರ್ಟ್ಸ್ ಕಮಿಟಿ ರೊ. ರಾಜು ಕುರುಡಗಿ ಪದಗ್ರಹಣ ಮಾಡಿದರು.

ಸಾನ್ನಿಧ್ಯ ವಹಿಸಿದ್ದ ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ಮಾತನಾಡಿ, ರೋಟರಿ ಗದಗ ಸೆಂಟ್ರಲ್ ಉತ್ತಮವಾದ ಕಾರ್ಯಗಳನ್ನು ಮಾಡುವ ಮೂಲಕ ಹೆಸರಾಗಿದೆ. ಸೇವೆಗೆ ಇನ್ನೊಂದು ಹೆಸರೇ ರೋಟರಿ ಸಂಸ್ಥೆ ಆಗಿದೆ ಎಂದು ನೂತನ ಪದಾಧಿಕಾರಿಗಳಿಗೆ ಶುಭ ಕೋರಿದರು.

ಈ ಸಂದರ್ಭದಲ್ಲಿ ಸಿ.ಎಫ್ ಪಾಟೀಲ, ಸಿ.ಜಿ. ಚನ್ನಪ್ಪಗೌಡರ, ಮಹಿಳಾ ಸದಸ್ಯರಾಗಿ ವಂದನಾ ಚೇ.ಅಂಗಡಿ, ಜ್ಯೋತಿ ವಿ.ಹಿರೇಮಠ, ವಿದ್ಯಾ ಪ್ರ.ಗಂಜಿಹಾಳ, ಸುಜಾತಾ ಶ.ಗುಡಿಮನಿ, ಜ್ಯೋತಿ ರಾ. ಉಮನಾಬಾದಿ, ಮಂಗಳಾ ಮ.ಬೇಲೇರಿ ಕ್ಲಬ್ ಸದಸ್ಯರಾಗಿ ಸೇರ್ಪಡೆಗೊಂಡರು.

ರೊ. ಇಂ. ಮೋಹನ ಹುಲಕೋಟಿ, ರೊ. ಶಶಿಧರ ದಿಂಡೂರ, ರೊ. ರಾಜಣ್ಣ ಮುಧೋಳ, ರೊ. ಪರಶುರಾಮ ನಾಯ್ಕರ್, ರೊ. ಸುರೇಶ ಅಬ್ಬಿಗೇರಿ, ರೊ. ಮಂಜುನಾಥ ಕಬಾಡಿ, ರೊ.ಡಿ.ಜಿ.ಕೊಳ್ಳಿ, ರೊ. ಕೆ.ವಿ. ಪಾಟೀಲ, ರೊ. ಸುರೇಶ ನಿಡಗುಂದಿ ಮೊದಲಾದವರು ಪಾಲ್ಗೊಂಡಿದ್ದರು.

## ಇಂದು ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಮಿಕ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಹಾಗೂ ಸಾರಿಗೆ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ಯೋಜನೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಜುಲೈ 18 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಎಪಿಎಂಸಿ ಯಾರ್ಡ್‌ನಲ್ಲಿನ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಕಾರ್ಮಿಕ ಇಲಾಖೆ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್ ಲಾಡ್ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ , ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಸಾರಿಗೆ ಇಲಾಖೆಯ ಕಾರ್ಯದರ್ಶಿ ಡಾ.ಎನ್.ವಿ.ಪ್ರಸಾದ್, ಕರ್ನಾಟಕ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಕಾರ್ಮಿಕ ಇಲಾಖೆಯ ಕಾರ್ಯದರ್ಶಿ ಶ್ರೀಮತಿ ರೋಹಿಣಿ ಸಿಂಧೂರಿ, ಕಾರ್ಮಿಕ ಇಲಾಖೆ ಆಯುಕ್ತರಾದ ಡಾ.ಎಚ್.ಎನ್. ಗೋಪಾಲಕೃಷ್ಣ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಕಾರ್ಯದರ್ಶಿಗಳು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಶ್ರೀಮತಿ ಭಾರತಿ ಡಿ, ಸಾರಿಗೆ ಇಲಾಖೆಯ ಆಯುಕ್ತರಾದ ಯೋಗೀಶ್ ಎ.ಎಂ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಜಂಟಿ ಕಾರ್ಯದರ್ಶಿಗಳು ಹಾಗೂ ಜಂಟಿ ಕಾರ್ಮಿಕ ಆಯುಕ್ತರಾದ ಡಾ. ಎಸ್.ಬಿ.ರವಿಕುಮಾರ್ ಆಗಮಿಸುವರು.

ಬೆಳಗಾವಿ ಪ್ರಾದೇಶಿಕ ಉಪ ಕಾರ್ಮಿಕ ಆಯುಕ್ತರಾದ ಡಿ.ಜಿ.ನಾಗೇಶ , ಧಾರವಾಡ ವಿಭಾಗ ಸಹಾಯಕ ಕಾರ್ಮಿಕ ಆಯುಕ್ತರಾದ ಸಚಿನ್ ವೈ ಹಳೇಮನಿ, ಗದಗ ಉಪವಿಭಾಗದ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಸ್ವಾಗತ ಕೋರಿದ್ದಾರೆ.

## ಚೇತನ ಕರಾಟೆ ಕ್ಲಬ್ ವಿದ್ಯಾರ್ಥಿಗಳ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷ್ಮೇಶ್ವರದಲ್ಲಿ ಇತ್ತೀಚೆಗೆ ನಡೆದ ರಾಷ್ಟ್ರಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಗದುಗಿನ ಚೇತನ ಕರಾಟೆ ಕ್ಲಬ್ ವಿದ್ಯಾರ್ಥಿಗಳು ಉತ್ತಮ ಸಾಧನೆ ದಾಖಲಿಸಿದ್ದಾರೆ. ಗಜಾನನ ಷಡಕ್ಷರಿ ಕುಮಟೆ (ತೃತೀಯ), ಕಟಾ (ಪ್ರಥಮ), ವೈಭವ ಮಾ. ಮಾರೋಳ ಕುಮಟೆ (ತೃತೀಯ), ಕಟಾ (ತೃತೀಯ), ಈಶ್ವರಿ ಷಡಕ್ಷರಿ ಕುಮಟೆ (ತೃತೀಯ), ಕಟಾ (ಪ್ರಥಮ), ಸಾಹಿತ್ಯ ಶ್ರೀನಿವಾಸಪುರ ಕುಮಟೆ (ತೃತೀಯ), ಕಟಾ (ತೃತೀಯ) ಸ್ಥಾನಗಳನ್ನು ಪಡೆದು ಗದಗ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಸಾಧನೆಗೈದ ಕರಾಟೆ ಪಟುಗಳಿಗೆ ಚೇತನ ಕರಾಟೆ ಕ್ಲಬ್‌ನ ಮುಖ್ಯ ಶಿಕ್ಷಕರಾದ ಪರಶುರಾಮ ಹಬೀಬ, ಚೇತನ ಕರಾಟೆ ಕ್ಲಬ್‌ನ ತರಬೇತುದಾರರಾದ ಚೇತನ ಹಬೀಬ, ದ್ಯಾಮಪ್ಪ ಹಾವೇರಿ, ಪ್ರವೀಣ ಕಾಂಬ್ಳೆ, ಶಿವರಾಜ ಗಡಾದ, ಗಂಗಪ್ಪ ಸಾಸ್ವಿಹಳ್ಳಿ, ಮಹಮ್ಮದ ಇಲಿಯಾಸ್ ನಾಗನೂರ, ಖುಷಿ ವೆರ್ಣೇಕರ ಮತ್ತು ಪಾಲಕರು ಅಭಿನಂದಿಸಿದ್ದಾರೆ.

## ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪರ್ಸಿಯನ ಜಿ.ಎನ್.ಎಂ ಮತ್ತು ಬಿ.ಎಸ್ಸಿ ನರ್ಸಿಂಗ್ ತರಬೇತಿ ಶಿಷ್ಯವೇತನ ಪಡೆಯಲು ಇಚ್ಛೆಯುಳ್ಳ ಅರ್ಹ ವಿದ್ಯಾರ್ಥಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 30.09.2025 ಆಗಿದ್ದು, ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಗಳನ್ನು ಖುದ್ದಾಗಿ ಅಭ್ಯರ್ಥಿಗಳೇ ಹಾಜರಾಗಿ, ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಈ ಕಚೇರಿಗೆ ಸಲ್ಲಿಸಬಹುದಾಗಿದೆ.

ಅಭ್ಯರ್ಥಿಗಳು ಕರ್ನಾಟಕ ರಾಜ್ಯ-ಕ್ಕೆ ಸೇರಿದವರಾಗಿರುಬೇಕು. ಅಭ್ಯರ್ಥಿಗಳು ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿರಬೇಕು. ಪೋಷಕರ ವಾರ್ಷಿಕ ಗರಿಷ್ಟ ವರಮಾನ ರೂ 2.50ಲಕ್ಷ ಇರಬೇಕು. ವಿದ್ಯಾರ್ಥಿಗಳನ್ನು ಅನುದಾನದ ಲಭ್ಯತೆಯಾನುಸಾರ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ವಿದ್ಯಾರ್ಥಿಗಳು ಸದರಿ ಯೋಜನೆಯಡಿ ಉತ್ತೇಜನ ಮೊತ್ತವನ್ನು ಪಡೆಯಲು ಪ್ರತಿ ಶೈಕ್ಷಣಿಕ ವರ್ಷದಲ್ಲಿ ಹೊಸ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಐ.ಎನ್.ಸಿ ಮಾನ್ಯತೆ ಪಡೆದ ಶಾಲೆ/ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಹರಿರುತ್ತಾರೆ. ಪ್ಯಾರಾ ಮೆಡಿಕಲ್ ಕಾಲೇಜುಗಳು ಪ್ಯಾರಾ ಮೆಡಿಕಲ್ ಬೋರ್ಡಿನಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಹರಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಜಿಲ್ಲೆ ಗದಗ ಈ ಕಚೇರಿಯನ್ನು ಸಂಪರ್ಕಿಬಹುದಾಗಿದೆ.

## ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ವಿಭಾಗದಲ್ಲಿ ಡೆಂಗಿ ಜ್ವರ ನಿಯಂತ್ರಣ ಈಡಿಸ್ ಲಾರ್ವಾ ಉತ್ಪತ್ತಿ ತಾಣ ನಾಶ ಚಟುವಟಿಕೆಗೆ ಇಲಾಖಾ ಮಾರ್ಗಸೂಚಿಯ ಪ್ರಕಾರ ಸ್ವಯಂ ಸೇವಕರನ್ನು ನೇಮಿಸಿಕೊಳ್ಳಲಾಗಿದೆ.

ಸದರಿ ಚಟುವಟಿಕೆಯಲ್ಲಿ ಡೆಂಗಿ ಜ್ವರ ನಿಯಂತ್ರಣದಲ್ಲಿ ಪ್ರಮುಖ ಪಾತ್ರ ವಹಿಸುವ ಈಡಿಸ್ ಲಾರ್ವಾ ಉತ್ಪತ್ತಿ ತಾಣ ಚಟುವಟಿಕೆಗಳನ್ನು ನಗರ, ಪಟ್ಟಣ ಪ್ರದೇಶಗಳ ಡೆಂಗಿ ಸಮಸ್ಯಾತ್ಮಕ ಪ್ರದೇಶಗಳಲ್ಲಿ ಕೈಗೊಳ್ಳಲು ತಾಲೂಕುವಾರು ನಿಗದಿತ ಸಂಖ್ಯೆಯ ಸ್ವಯಂಸೇವಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶವನ್ನು ಕಲ್ಪಿಸಲಾಗಿದೆ.

ಮನೆಗಳು, ಕಚೇರಿ, ಆಸ್ಪತ್ರೆ, ಶಾಲಾ-ಕಾಲೇಜು, ವಾಣಿಜ್ಯ ಸಂಕೀರ್ಣಗಳು, ಸಿನಿಮಾ ಹಾಲ್ ಹಾಗೂ ಇತ್ಯಾದಿಗಳಲ್ಲಿ ಈಡಿಸ್ ಲಾರ್ವಾ ಉತ್ಪತ್ತಿ ತಾಣ ನಾಶ ಚಟುವಟಿಕೆಯನ್ನು ಕೈಗೊಳ್ಳಬೇಕಾಗಿರುತ್ತದೆ. ಒಬ್ಬ ಸ್ವಯಸೇವಕರಿಗೆ ಒಟ್ಟು 100 ಮನೆಗಳ ಗುರಿ ನಿಗದಿಗೊಳಿಸಲಾಗಿದ್ದು, ತಮ್ಮ-ತಮ್ಮ ವ್ಯಾಪ್ತಿ ಅಥವಾ ಮನೆಗೆ ಬೇಟಿ ನೀಡಿದಾಗ ಸಾರ್ವಜನಿಕರು ಸಹಕಾರ ನೀಡಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ಕುಟುಂಬ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರು ಪೂರೈಕೆಗೆ ಗಂಭೀರ ಕ್ರಮ ವಹಿಸಿ

▸▸ಮೊದಲನೇ ಪುಟದಿಂದ

15ನೇ ಹಣಕಾಸು ಯೋಜನೆಯಡಿ 2020-21ರಿಂದ 2024-25ರವರೆಗೆ ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ 632 ಕಾಮಗಾರಿ ಮಂಜೂರಾಗಿದ್ದು, 542 ಪೂರ್ಣಗೊಳಿಸುವ ಮೂಲಕ ಶೇ.85.76 ಭೌತಿಕ ಗುರಿ ಸಾಧನೆಯಾಗಿದೆ. ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಸಾಮಾಜಿಕ ಭದ್ರತಾ ಯೋಜನೆಯಡಿ ವೃದ್ಧಾಪ್ಯ ವೇತನ, ವಿಧವಾ ವೇತನ, ಅಂಗವಿಕಲ ವೇತನ, ಸಂಧ್ಯಾ ಸುರಕ್ಷಾ ಯೋಜನೆ, ಮೃತರಹಿತ ಪತ್ನಿಗೆ ವಿಧವಾ ವೇತನ, ಮನಸ್ವಿನಿ, ಮೈತ್ರಿ ಯೋಜನೆಗಳಡಿ ಒಟ್ಟು 1,62,230 ಫಲಾನುಭವಿಗಳಿದ್ದಾರೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ಒದಗಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಕಾರ್ಮಿಕ ಸಚಿವ ಸಂತೋಷ ಎಸ್ ಲಾಡ್ ಜಿಲ್ಲಾ ಪ್ರವಾಸ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಮಿಕ ಇಲಾಖೆ ಸಚಿವ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್ ಲಾಡ್ ಅವರು ಜುಲೈ 18 ರಂದು ಬೆಳಿಗ್ಗೆ 9 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ಹೊರಟು ಬೆಳಿಗ್ಗೆ 10 ಗಂಟೆಗೆ ಗದಗ ಜಿಲ್ಲೆಗೆ ಆಗಮಿಸಿ, ಗದಗ ಎಪಿಎಂಸಿ ಯಾರ್ಡ್ ನಲ್ಲಿ ಇರುವ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಗದಗ ಜಿಲ್ಲೆಯ ವಿವಿಧ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಮತ್ತು ಸ್ಮಾರ್ಟ್ ಕಾರ್ಡ್ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1.30 ಗಂಟೆಗೆ ಕಾಂಗ್ರೆಸ್ ಪಕ್ಷದ ಕಚೇರಿಗೆ ಭೇಟಿ ನೀಡುವರು. ಮಧ್ಯಾಹ್ನ 2 ಗಂಟೆಗೆ ಗದುಗಿನಿಂದ ಕೊಪ್ಪಳಕ್ಕೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಭೀಕರ ಮಳೆಗೆ ಜಲಸ್ಫೋಟ ಸಂಭವಿಸಿ ಗುಡ್ಡ ಕುಸಿತ: ಅಪಾಯದಲ್ಲಿ ಹಲವು ಮನೆಗಳು!

■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಮಂಗಳೂರು ಹೊರವಲಯದಲ್ಲಿರುವ ಯಯ್ಯಾಡಿ ಕೊಂಚಾಡಿಯಲ್ಲಿ ಭೀಕರ ಮಳೆಯ ಕಾರಣ ಜಲಸ್ಫೋಟವುಂಟಾಗಿ ಗುಡ್ಡ ಕುಸಿದಿದೆ. ಮನೆ ಹಿಂಭಾಗ ಒಂದರಲ್ಲಿ ಗುಡ್ಡ ಕುಸಿತ ಉಂಟಾಗಿದ್ದು ಮಣ್ಣು ಮತ್ತು ಗಿಡಗಳು ಉರುಳಿ ಬಂದು ಮನೆಯ ಸ್ಟೇರ್ ಕೇಸ್ ಭಾಗಕ್ಕೆ ಹಾನಿಯನ್ನುಂಟು ಮಾಡಿವೆ. ಅದೃಷ್ಟವಶಾತ್ ಮನೆಯಲ್ಲಿರುವವರಿಗೆ ಯಾವುದೇ ಅಪಾಯ ಸಂಭವಿಸಿಲ್ಲ. ಕಲ್ಲು, ಮಣ್ಣು ಮತ್ತು ಗಿಡಗಳು ಮನೆ ಅಂಗಳಕ್ಕೆ ನುಗ್ಗಿ ಬಂದಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.

### ಸಮುದಾಯದ ಅರೋಗ್ಯ ಕೇಂದ್ರದಲ್ಲಿ 50 ಯೂನಿಟ್ ಸಾಮರ್ಥ್ಯದ ಜೀವ ರಕ್ಷಕ ಬ್ಲಡ್ ಬ್ಯಾಂಕ್

# ನಾಳೆ ರಕ್ತ ಸಂಗ್ರಹಣಾ ಘಟಕದ ಕಾರ್ಯಾರಂಭ

■ವಿಜಯಸಾಕ್ಷಿ ಸುದ್ದಿ,ಲಕ್ಷ್ಮೇಶ್ವರ

ಪಟ್ಟಣದ ಸಮುದಾಯ ಅರೋಗ್ಯ ಕೇಂದ್ರದಲ್ಲಿ ಜು.19ರಂದು ರಕ್ತ ಸಂಗ್ರಹಣಾ ಘಟಕ ಕಾರ್ಯಾರಂಭಗೊಳ್ಳಲಿದೆ. ಕಳೆದ 10 ವರ್ಷಗಳ ಹಿಂದೆ ಕಾರ್ಯಾರಂಭವಾಬೇಕಿದ್ದ ರಕ್ತ ಸಂಗ್ರಹಣಾ ಘಟಕ ಅನೇಕ ಕಾರಣಗಳಿಂದ ನೆನೆಗುದಿಗೆ ಬಿದ್ದಿತ್ತು.

ಲಕ್ಷ್ಮೇಶ್ವರ ಸೇರಿ ನೆರೆಯ ಸವಣೂರ, ಶಿಗ್ಗಾಂವ, ಕುಂದಗೋಳ, ಶಿರಹಟ್ಟಿ ತಾಲೂಕಿನಿಂದ ನಿತ್ಯ ನೂರಾರು ರೋಗಿಗಳು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಚಿಕಿತ್ಸೆಗೆ ಬರುತ್ತಾರೆ. ಕೈಗಾ-ಇಳಕಲ್, ಕಲ್ಮಲಾ-ಶಿಗ್ಗಾಂವ, ಮಂಗಸೂಳಿ-ಲಕ್ಷ್ಮೇಶ್ವರ ರಾಜ್ಯ ಹೆದ್ದಾರಿಗೆ ಹೊಂದಿಕೊಂಡಿರುವ ಈ ಆಸ್ಪತ್ರೆಯ ವ್ಯಾಪ್ತಿಯಲ್ಲಿ ನಿತ್ಯವೂ ಅಪಘಾತ ಪ್ರಕರಣಗಳು ನಡೆದ ಸಂದರ್ಭದಲ್ಲಿ ರಕ್ತದ ಅವಶ್ಯಕತೆ ಸಾಕಷ್ಟಿರುತ್ತದೆ. ಅಲ್ಲದೇ ಪ್ರತಿ ತಿಂಗಳು ಕನಿಷ್ಠ 50ಕ್ಕೂ ಹೆಚ್ಚು ಹೆರಿಗೆಗಳಾಗುತ್ತವೆ. ಮೂಲವ್ಯಾಧಿ, ಗಂಟುರೋಗ, ಹರ್ನಿಯಾ ಇತರೇ ಸಣ್ಣಪುಟ್ಟ ಶಸ್ತ್ರ ಚಿಕಿತ್ಸೆಗಳು ನಡೆಯುತ್ತಿರುತ್ತವೆ.

ಪಟ್ಟಣ ಸೇರಿ ಸುತ್ತಲಿನ ತಾಲೂಕಿನಿಂದ ಹತ್ತಾರು ಖಾಸಗಿ ಆಸತ್ರೆಗಳಲ್ಲಿ ಚಿಕಿತ್ಸೆಗೊಳಪಡುವ ರೋಗಿಗಳಿಗೆ ಈ ಬ್ಲಡ್ ಬ್ಯಾಂಕ್‌ನಿಂದ ಸಾಕಷ್ಟು ಉಪಯೋಗವಾಗಲಿದೆ.



ಅಗತ್ಯ, ತುರ್ತು ಸಂದರ್ಭದಲ್ಲಿ ರೋಗಿಗಳೊಂದಿಗೆ ಹುಬ್ಬಳ್ಳಿ, ಗದುಗಿಗೆ ಹೋಗಲೇಬೇಕಾದ ಅನಿವಾರ್ಯತೆ ಇತ್ತು. ಅನೇಕ ಸಲ ತುರ್ತು ರಕ್ತ ಸಿಗದೇ ಜೀವ ಹೋದ ಸಂದರ್ಭಗಳೂ ಇವೆ. ಈ ಭಾಗದ ಜನರಿಂದ ಬ್ಲಡ್ ಬ್ಯಾಂಕ್ ಪ್ರಾರಂಭದ ಬಗ್ಗೆ ಬೇಡಿಕೆ ಇತ್ತು. ಇದೀಗ ಇದೇ ಆಸ್ಪತ್ರೆಯಲ್ಲಿ ವೈದ್ಯರಾಗಿ ಸೇವೆ ಸಲ್ಲಿಸಿದ ಶಾಸಕ ಡಾ. ಚಂದ್ರು ಲಮಾಣಿ ಅವರ ಪ್ರಯತ್ನ ಮತ್ತು ವೈದ್ಯಾಧಿಕಾರಿ ಡಾ. ಶ್ರೀಕಾಂತ ಕಾಟೇವಾಲೆ ಅವರ ಇಚ್ಛಾಶಕ್ತಿಯಿಂದ ಜನೋಪಯೋಗಕ್ಕೆ ಅಣಿಯಾಗುತ್ತಿದೆ.

ಜಿಲ್ಲೆಯ ಕೆಲ ತಾಲೂಕು ಆಸ್ಪತ್ರೆಗಳಲ್ಲಿಯೂ ಬ್ಲಡ್ ಬ್ಯಾಂಕ್ ಕಾರ್ಯಾರಂಭ ಮಾಡುತ್ತಿಲ್ಲ. ಆದರೆ ಲಕ್ಷ್ಮೇಶ್ವರದ ಸಮುದಾಯದ ಅರೋಗ್ಯ ಕೇಂದ್ರದಲ್ಲಿ 50 ಯೂನಿಟ್ ಸಾಮರ್ಥ್ಯದ, ಆಧುನಿಕ ತಂತ್ರಜ್ಞಾನದ ಜೀವ ರಕ್ಷಕ ರಕ್ತ ಸಂಗ್ರಹಣಾ ಘಟಕ ಪ್ರಾರಂಭಗೊಳ್ಳುತ್ತಿರುವುದು ಸಾರ್ವಜನಿಕರಲ್ಲಿ ನೆಮ್ಮದಿ ಮೂಡಿಸಿದೆ. ತಪಾಸಣೆ ಘಟಕ ಯಂತ್ರ, ಇನ್ಕ್ಯೂಬೇಟರ್, ಮೈಕ್ರೋಸ್ಕೋಪ್, ಸೆಂಟರ್ ಫ್ಯೂಸ್ ಸೇರಿ ಪೂಕರ ಉಪಕರಣಗಳು ಲಭ್ಯವಿದೆ. ಜನರೇಟರ್, ಸೋಲಾರ್ ವ್ಯವಸ್ಥೆಯೂ ಇದಕ್ಕಿದೆ. ಇದಕ್ಕಾಗಿ ವೈದ್ಯಾಧಿಕಾರಿ ಡಾ. ಶ್ರೀಕಾಂತ ಕಾಟೇವಾಲೆ ವಿಶೇಷ ತರಬೇತಿ ಪಡೆದಿದ್ದಾರೆ. ನುರಿತ ಲ್ಯಾಬ್ ಟೆಕ್ನಿಷಿಯನ್ ವಿಜಯ ಮಾಂಡ್ರೆ ಹಲವು ವರ್ಷದಿಂದ ಇದೇ ಆಸ್ಪತ್ರೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ.

> ಸರ್ಕಾರಿ ಆಸ್ಪತ್ರೆ ಅಷ್ಟೇ ಅಲ್ಲದೇ ನಮ್ಮ ಭಾಗದ ಖಾಸಗಿ ಆಸ್ಪತ್ರೆಗಳಲ್ಲಿ ನಡೆಯುವ ಹೆರಿಗೆ, ಅಪಘಾತ, ಶಸ್ತ್ರಚಿಕಿತ್ಸೆಯಂತಹ ಅನೇಕ ಸಂದರ್ಭಗಳಲ್ಲಿ ರಕ್ತದ ಅವಶ್ಯಕತೆ ಸಾಕಷ್ಟಿದೆ. ತುರ್ತು ಸಂದರ್ಭದಲ್ಲಿ ಕಿಮ್ಸ್ ಮತ್ತು ಜಿಮ್ಸ್‌ಗೆ ಕಳುಹಿಸಲೇಬೇಕಾಗಿತ್ತು. ಇದೀಗ ನಮ್ಮ ಆಸ್ಪತ್ರೆಯಲ್ಲಿ ರಕ್ತ ಸಂಗ್ರಹಣಾ ಘಟಕ ಪ್ರಾರಂಭಗೊಳ್ಳುತ್ತಿರುವುದರಿಂದ ರೋಗಿಗಳಿಗೆ ಅನಕೂಲವಾಗಿದೆ. ರಕ್ತ ಸಂಗ್ರಹಣಾ ಘಟಕದ ಉದ್ಘಾಟನೆಯ ದಿನ ಆಸ್ಪತ್ರೆಯಲ್ಲಿಯೇ ಪತ್ರಕರ್ತರ ಸಂಘದಿಂದ ರಕ್ತದಾನ ಶಿಬಿರ ಹಮ್ಮಿಕೊಂಡಿರುವುದು ಸಂತಸ ತಂದಿದೆ.
>
> **– ಡಾ. ಶ್ರೀಕಾಂತ ಕಾಟೇವಾಲೆ.**
> **ಸಮುದಾಯ ಆರೋಗ್ಯ ಕೇಂದ್ರದ ಆಡಳಿತಾಧಿಕಾರಿ.**

### ಸ್ವಾಮಿ ವಿವೇಕಾನಂದ ವಿಜ್ಞಾನ ಮಹಾವಿದ್ಯಾಲಯದಲ್ಲಿ ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆಗಳ ಉದ್ಘಾಟನೆ

# ಎಲ್ಲ ರಂಗಗಳಲ್ಲಿಯೂ ಗೆಲುವು ಸಾಧಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಾಂಸ್ಕೃತಿಕ ಚಟುವಟಿಕೆಗಳು ಕೇವಲ ಒಂದು ಕಾರ್ಯಕ್ರಮವಾಗಿರದೆ ಗುರಿಯನ್ನು ಮುಟ್ಟುವ ವೇದಿಕೆಯಾಗಬೇಕು. ವಿದ್ಯಾರ್ಥಿಗಳು ಜೀವನದಲ್ಲಿ ಪಠ್ಯಪುಸ್ತಕದ ಜೊತೆಗೆ ಸಹಪಠ್ಯ ಚಟುವಟಿಕೆಗಳು ಕೂಡಾ ಮುಖ್ಯ ಪಾತ್ರ ವಹಿಸುತ್ತವೆ. ಆದ್ದರಿಂದ ವಿದ್ಯಾರ್ಥಿಗಳು ಎಲ್ಲ ರಂಗಗಳಲ್ಲಿಯೂ ಭಾಗವಹಿಸಿ ಗೆಲ್ಲಬೇಕು ಎಂದು ಹುಲಕೋಟಿಯ ಕೆ.ಎಚ್. ಪಾಟೀಲ ಸರಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯೆ ಶಹನಾಜ್ ಖಾನ್ ಕಿವಿಮಾತು ಹೇಳಿದರು.

ಸ್ಥಳೀಯ ಸ್ವಾಮಿ ವಿವೇಕಾನಂದ ಪದವಿಪೂರ್ವ ವಿಜ್ಞಾನ ಮಹಾವಿದ್ಯಾಲಯದಲ್ಲಿ ನಡೆದ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಡಾ. ಎಸ್. ಆರ್. ನಾಗನೂರ ಮಾತನಾಡಿ, ಪ್ರತಿಯೊಬ್ಬ ಪಾಲಕರು ತಮ್ಮ ಮಕ್ಕಳ ಭವಿಷ್ಯದ ಕುರಿತು ಕನಸನ್ನು ಕಾಣುತ್ತಿರುತ್ತಾರೆ. ಅವರ ಕನಸನ್ನು ನನಸು ಮಾಡುವಂತಹ ಜೀವನವನ್ನು ರೂಪಿಸಿಕೊಳ್ಳುವುದು ವಿದ್ಯಾರ್ಥಿಗಳಿಗೆ ಅವಶ್ಯಕವಾಗಿದೆ ಎಂದು ಹೇಳಿದರು.

ವೇದಿಕೆಯ ಮೇಲೆ ಕಾಲೇಜಿನ ಆಡಳಿತ ಮಂಡಳಿಯ ಮುಖ್ಯಸ್ಥರಾದ ವೆಂಕರಡ್ಡಿ ಎಸ್.ಮಂಗಣ್ಣವರ, ಪ್ರಾಚಾರ್ಯರಾದ ಪ್ರಿಯಾ ಎಮ್. ಪಾಟೀಲ ಉಪಸ್ಥಿತರಿದ್ದರು. ಶ್ರೇಯಾ ಹಿರೇಮಠಳ ಪ್ರಾರ್ಥಿಸಿದರು. ಅನುಷಾ ಹೊನ್ನಿನಾಯ್ಕರ ಹಾಗೂ ಸಂಗಡಿಗರು ನಾಡಗೀತೆಯನ್ನು ಹಾಡಿದರು. ಮಿಥುನ ಜನಗಿ ಸ್ವಾಗತಿಸಿದರು. ರೇಣುಕಾ ಗೌಡರ ಹಾಗೂ ಪವಿತ್ರ ಸನ್ನಿಂಗನ್ನವರ ಮುಖ್ಯ ಅತಿಥಿಗಳ ಪರಿಚಯ ಮಾಡಿದರು. ಕಾಲೇಜಿನ ಪ್ರಧಾನ ಕಾರ್ಯದರ್ಶಿ ಜವೀದ ಕಾತರಕಿ ಕ್ರೀಡಾಜ್ಯೋತಿಯನ್ನು ಬೆಳಗಿಸಿದರು. ರೋಜಾ ಕಾತರಕಿ ಕಾರ್ಯಕ್ರಮ ನಿರೂಪಿಸಿದರು. ಫಾತೀಮಾ ಮುಲ್ಲಾ ವಂದಿಸಿದರು.

ಕಾಲೇಜಿನ ಉಪನ್ಯಾಸಕರು, ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಮುಖ್ಯಸ್ಥ ಪ್ರಭು ಅಂಗಡಿ ಪ್ರತಿಜ್ಞಾ ವಿಧಿ ಬೋಧಿಸಿದರು. ಕೆ.ಎಚ್. ಪಾಟೀಲ ಸೆಂಟರ್ ಫಾರ್ ಹ್ಯೂಮನ್ ಎಕ್ಸಲನ್ಸ್ ಸಂಸ್ಥೆಯ ನಿರ್ದೇಶಕರಾದ ಆರ್. ಆರ್. ಸಾವಕಾರ, ಆರ್‌ಎಮ್‌ಎಸ್ ಸಂಸ್ಥೆಯ ಬಸಯ್ಯ ಹಿರೇಮಠ, ಕಾಲೇಜಿನ ಎಲ್ಲ ಸಿಬ್ಬಂದಿ ಹಾಗೂ ಉಪನ್ಯಾಸಕೇತರ ಸಿಬ್ಬಂದಿಗಳು ಭಾಗವಹಿಸಿದ್ದರು.




> ಕೆ.ಎಚ್. ಪಾಟೀಲ ಸರಕಾರಿ ಪ್ರೌಢಶಾಲೆಯ ದೈಹಿಕ ಶಿಕ್ಷಕಿ ಪಾರ್ವತಿ ಅವರಡ್ಡಿ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಹೊಗಳಿಕೆಗೆ ಹಿಗ್ಗದೆ, ತೆಗಳಿಕೆಗೆ ಕುಗ್ಗದೆ ಜೀವನವನ್ನು ಸಮನಾಗಿ ಸ್ವೀಕರಿಸಬೇಕು. ಹೇಗೆ ಹೂವು ಅರಳುವಾಗ ಬಿಸಿಲು-ಮಳೆಯನ್ನು ಸಹಿಸಿಕೊಂಡು ಅರಳುತ್ತದೆಯೋ ಹಾಗೆ ವಿದ್ಯಾರ್ಥಿಗಳ ಪ್ರತಿಭೆ ಅರಳಬೇಕು ಎಂದರು.

# ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುಮತಿ ಸರಳಗೊಳಿಸಿ




■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ನಾಡಿನ ಪ್ರತಿ ಮಗುವಿಗೆ ಕನ್ನಡ ಭಾಷೆಯಲ್ಲಿ ಶಿಕ್ಷಣ ನೀಡುವುದು ಸರ್ಕಾರದ ಆದ್ಯ ಕರ್ತವ್ಯ. ಆದರೆ ಸರ್ಕಾರವೇ ನಾಡಿನಾದ್ಯಂತ ಶಿಕ್ಷಣ ನೀಡಲು ಸಾಧ್ಯವಾಗದೆ ಇರುವುದರಿಂದ ಹಲವಾರು ದಶಕಗಳಿಂದ ಮಠ ಮಾನ್ಯಗಳು ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳು ಉತ್ತಮ ಶಿಕ್ಷಣ ನೀಡುತ್ತಾ ಬಂದಿವೆ ಎಂದು ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘದ ಅಧ್ಯಕ್ಷ ಬಸವರಾಜ ಕೊಂಡಜ್ಜಿ ತಿಳಿಸಿದರು.

ಪಟ್ಟಣದ ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಗುರುವಾರ ಪ್ರತಿಭಟನೆ ನಡೆಸಿ, ಕ್ಷೇತ್ರಶಿಕ್ಷಣಾಧಿಕಾರಿಗಳ ಕಚೇರಿಗೆ ತೆರಳಿ ಬಿಇಒ ಎಚ್.ಲೇಫಾಕ್ಷಪ್ಪನವರಿಗೆ ಮನವಿ ಸಲ್ಲಿಸಿ, ತಾಲೂಕು ಆಡಳಿತ ಕಚೇರಿಗೆ ತೆರಳಿ ತಹಸೀಲ್ದಾರ ಬಿ.ವಿ. ಗಿರೀಶ್ ಬಾಬು ಅವರಿಗೆ ಮನವಿ ಪತ್ರ ಸಲ್ಲಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಪಂಚ ಗ್ಯಾರಂಟಿ ಭಾಗ್ಯಗಳನ್ನು ನೀಡುತ್ತಿರುವ ಕಾಂಗ್ರೆಸ್ ಸರ್ಕಾರ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುಮತಿ ನವೀಕರಣ ಪ್ರಕ್ರಿಯೆ ಸರಳಗೊಳಿಸಬೇಕು. 1995ರ ನಂತರ ಪ್ರಾರಂಭವಾದ ಖಾಸಗಿ ಶಾಲಾ-ಕಾಲೇಜುಗಳನ್ನು ಅನುದಾನಕ್ಕೊಳಪಡಿಸಬೇಕು. 371 ಜೆ ಅಡಿ ಸಿಗಬೇಕಾದ ಎಲ್ಲಾ ಸೌಲಭ್ಯಗಳನ್ನು ನೀಡಬೇಕು ಎಂದು ಒತ್ತಾಯಿಸಿದರು.

ಕಾರ್ಯದರ್ಶಿ ಡಿ.ಪಿ. ಮಲ್ಲಿಕಾರ್ಜುನ ಮಾತನಾಡಿ, ಸರ್ಕಾರದ ಕಠಿಣ, ಸರ್ಕಾರದ ಮಲತಾಯಿ ಧೋರಣೆಯಿಂದ ಸಾವಿರಾರು ಶಾಲಾ-ಕಾಲೇಜುಗಳು ಮುಚ್ಚಲ್ಪಟ್ಟಿವೆ. ಕಾಸಗಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಜೀವನಕ್ಕೆ ಕಂಟಕ ತರುವ ಕೆಲಸ ಮಾಡುತ್ತಿರುವುದು ಖಂಡನೀಯವೆಂದರು.

ಪ್ರತಿಭಟನೆಯಲ್ಲಿ ದಾದಾಪೀರ, ಸಿ. ಬಸವರಾಜ, ಅನಿಲ್, ಪಿ. ಮಂಜುನಾಥ, ಹಾಶೀಮ್, ಮಹಾರುದ್ರಾಚಾರ್, ತಾನಾಜಿ, ಡಾ. ರವಿ ಅಧಿಕಾರ, ಮಂಜುನಾಥ ಪೂಜಾರ, ವೀರೇಶ, ಕೆ.ಎಸ್. ಬಸವರಾಜಪ್ಪ, ತಿಮ್ಮಪ್ಪ, ಅನ್ನಪೂರ್ಣ, ಚೆನ್ನಬಸವನಗೌಡ, ಸಂತೋಷ, ಆನಂದಪ್ಪ, ಅರವಿಂದ, ಬಸವಲಿಂಗಪ್ಪ, ವಾಗಿಶ್ ವಕೀಲ ಸೇರಿದಂತೆ ಶಿಕ್ಷಕರು, ಸಿಬ್ಬಂದಿಗಳು ಪಾಲ್ಗೊಂಡಿದ್ದರು.

### ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳ ವಿತರಣೆ ಕಾರ್ಯಕ್ರಮದಲ್ಲಿ ಡಾ. ಮಹಾಂತೇಶ ಸಜ್ಜನರ

# ಸರ್ಕಾರಿ ಶಾಲಾ ವಿದ್ಯಾರ್ಥಿಗಳ ಅಭಿವೃದ್ಧಿಗೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ನಾವು ಮಾಡುವ ಕೆಲಸ ಕಾರ್ಯಗಳು ಜನಮೆಚ್ಚುಗೆ ಪಡೆಯುವಂತಿರಬೇಕು. ಸರ್ಕಾರಿ ಶಾಲೆಗಳ ಮಕ್ಕಳ ಶೈಕ್ಷಣಿಕ ಚಟುವಟಿಕೆಗಳಿಗೆ ಕೈಜೋಡಿಸುವ ಸದಾವಕಾಶಕ್ಕೆ ಎಲ್ಲರೂ ಒಂದಾಗಿ ಮುಂದಾಗಿ ಬಂದಾಗ ಸರ್ಕಾರಿ ಶಾಲೆಗಳ ಸಬಲೀಕರಣವು ಯಶಸ್ವಿಯಾಗುವುದು ಎಂದು ಗದುಗಿನ ಯುವ ವೈದ್ಯ ಡಾ. ಮಹಾಂತೇಶ ಸಜ್ಜನರ ಹೇಳಿದರು.

ಅವರು ಗದುಗಿನ ಸರ್ಕಾರಿ ಉರ್ದು ಶಾಲೆ ನಂ.4ರಲ್ಲಿ ಜಯೆಂಟ್ಸ್ ಗ್ರೂಪ್ಸ್ ಆಫ್ ಸಖಿ ಸಹೇಲಿ ಸಂಘಟನೆಯಿಂದ ಜರುಗಿದ ದಾನಿಗಳು ವಿದ್ಯಾರ್ಥಿಗಳಿಗೆ ಕೊಡಮಾಡಿದ ಕಲಿಕಾ ಸಾಮಗ್ರಿಗಳ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸರ್ಕಾರಿ ಶಾಲೆಯ ಮಕ್ಕಳು ಜೀವನದ ಅನುಭವವನ್ನು ಓದಿ-ತಿಳಿದು ಅರಿತುಕೊಂಡವರು. ಇಲ್ಲಿ ಕಲಿಕೆಯೊಂದಿಗೆ ಜೀವನದ ಸುಗಮ ಮಾರ್ಗಗಳನ್ನು ಮಕ್ಕಳಿಗೆ ತಿಳಿಸಲಾಗುತ್ತದೆ. ಅನುಭವದೊಂದಿಗೆ ಅರಿತ ಮಕ್ಕಳು ಬದುಕಿನಲ್ಲಿ ಗಟ್ಟಿತನವನ್ನು ಕಂಡುಕೊಳ್ಳುತ್ತಾರೆ. ಇಂದು ವಿವಿಧ ಹುದ್ದೆಗಳಲ್ಲಿ ಮುಖ್ಯ ಅಧಿಕಾರಿಗಳಾಗಿರುವವರು ಹೆಚ್ಚಾಗಿ ಸರ್ಕಾರಿ ಶಾಲೆಯಲ್ಲಿ ಓದಿದವರು. ಬದುಕನ್ನು ನಾವು ಹೇಗೆ ನಿಭಾಯಿಸಬೇಕು. ನಮ್ಮ ಜೀವನದ ಗುರಿ ಏನು ಎಂಬುದನ್ನು ಇಲ್ಲಿ ನಾವು ಕಂಡುಕೊಳ್ಳುತ್ತೇವೆ. ನಾನೂ ಕಲಿತದ್ದು ಸರ್ಕಾರಿ ಶಾಲೆಯಲ್ಲಿಯೇ ಎಂಬ ಹೆಮ್ಮೆ ನನಗಿದೆ. ಇಂತಹ ಮಕ್ಕಳಿಗೆ ಸಹಾಯ ಮಾಡುವ ಅವಕಾಶ ಸಿಕ್ಕಿದ್ದು ನನ್ನ ಸುದೈವ ಎಂದರು.

ಜಯೆಂಟ್ಸ್ ಗ್ರೂಪ್ಸ್ ಆಫ್ ಸಖಿ ಸಹೇಲಿ ಸಂಘಟನೆಯ ಅಧ್ಯಕ್ಷೆ ಸುಮಾ ಪಾಟೀಲ ಮಾತನಾಡಿ, ಸಂಘ-ಸಂಸ್ಥೆಗಳು ಮತ್ತು ದಾನಿಗಳು ಸರ್ಕಾರಿ ಶಾಲೆಗಳ ಮಕ್ಕಳ ಶೈಕ್ಷಣಿಕ ಚಿಂತನೆಗೆ ಅಡಿ ಇಟ್ಟಿರುವುದು ಆರೋಗ್ಯಕರ ಬೆಳವಣಿಗೆ. ಮೇಲಿಂದ ಮೇಲೆ ಶಾಲೆಗಳಿಗೆ ಭೇಟಿ ನೀಡಿ ಮಕ್ಕಳ ಅವಶ್ಯಕತೆಗಳನ್ನು ಪೂರೈಸುವ ಕಾರ್ಯ ನಿರಂತರವಾಗಿದ್ದಾಗ ಸಬಲೀಕರಣ ಸಾಧ್ಯ ಎಂದರು.

ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ, ಸಂಘಟನೆಯ ಪದಾಧಿಕಾರಿಗಳಾದ ರೇಖಾ ರೊಟ್ಟಿ, ಅಶ್ವಿನಿ ಮಾದಗುಂಡಿ, ಚಂದ್ರಕಲಾ ಸ್ಥಾವರಮಠ, ಪದ್ಮಾ ಕಬಾಡಿ, ಅನುರಾಧಾ ಅಮಾತ್ಯಗೌಡರ ಸೇರಿದಂತೆ ಶಾಲಾ ಶಿಕ್ಷಕರಾದ ಎನ್.ಎಚ್. ಜಕ್ಕಲಿ, ಐ.ಎ. ಗಾಡಗೋಳಿ, ಎಚ್.ಬಿ. ಮಕಾನದಾರ, ಎಸ್.ಎಸ್. ಬಳ್ಳಾರಿ, ಬಸವಣ್ಣೆವ್ವ ಮುಳ್ಳಾಳ, ಸಾವಿತ್ರಿ ಪಿಳ್ಳೆ, ಗೀತಾ ಮಹಾಕಾಳಿಮಠ, ಅರುಣಾ ಬನ್ನಿಗೋಳ ಸೇರಿದಂತೆ ಪಾಲಕ-ಪೋಷಕರು ಉಪಸ್ಥಿತರಿದ್ದರು.



> ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟೆಪ್ಪನವರ ಮಾತನಾಡಿ, ದಾನಿಗಳು ಸರ್ಕಾರಿ ಶಾಲೆಗಳಿಗೆ ಸ್ಫೂರ್ತಿಯಾಗಿದ್ದಾರೆ. ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಚಿಂತನೆ ಮಾಡಿ ಅವರ ಓದು-ಬರಹಕ್ಕೆ ಪೂರಕ ಸಾಮಗ್ರಿಗಳನ್ನು ನೀಡುವ ಮೂಲಕ ದಾನಿಗಳು ಶೈಕ್ಷಣಿಕ ಅಭಿವೃದ್ಧಿಗೆ ಬೆನ್ನೆಲುಬಾಗಿದ್ದಾರೆ ಎಂದರು.



**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.

ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಟೆಂಡರ್/742/2025-26 ದಿನಾಂಕ:16.07.2025

**ಟೆಂಡರ್ ಪ್ರಕಟಣೆ**

ಕರ್ನಾಟಕ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತರಾದ ಆಸಕ್ತಿಯುಳ್ಳ ಗುತ್ತೇದಾರರಿಂದ ಈ ಕೆಳಕಾಣಿಸಿದ ಕಾಮಾಗಾರಿಗೆ ಟೆಂಡರ್‌ನ್ನು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಟೆಂಡರ್ ಆಹ್ವಾನಿಸಲಾಗಿದೆ. ಇದಕ್ಕಾಗಿ ಗುತ್ತೇದಾರರು ಅಂತರ್ಜಾಲದಿಂದ ಮೂಲಕ ವೆಬ್ ಸೈಟ್ ವಿಳಾಸ https://kppp.karnataka.gov.in/ನ್ನು ಸಂದರ್ಶಿಸಬಹುದಾಗಿರುತ್ತದೆ .ಹೆಚ್ಚಿನ ಮಾಹಿತಿ ಬೇಕಾದಲ್ಲಿ ಗುತ್ತೇದಾರರು ಈ ಕೆಳಗೆ ಸಹಿ ಮಾಡಿದ ಅಧಿಕಾರಿಗಳ ಕಚೇರಿಯಲ್ಲಿ ಕಚೇರಿ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿರುತ್ತದೆ.

| ಕ್ರ. ಸಂ | ಕಾಮಗಾರಿಯ ವಿವರ | ಟೆಂಡರ್‌ಗೆ ಸೂಚಿಸಿದ ಅಂದಾಜು ಮೊತ್ತ (ಲಕ್ಷಗಳಲ್ಲಿ) |
|---|---|---|
| 1 | GBUDA/2025-26/SE0006/CALL-2 | 15.56 |
| 2 | GBUDA/2025-26/OW/WORK_INDENT9(CAT-I) | 3.00 |
| 3 | GBUDA/2025-26/OW/WORK_INDENT11 | 24.00 |
| 4 | GBUDA/2025-26/OW/WORK_INDENT15 | 24.41 |
| 5 | GBUDA/2025-26/OW/WORK_INDENT16 | 24.65 |
| 6 | GBUDA/2025-26/OW/WORK_INDENT17 | 24.35 |
| 7 | GBUDA/2025-26/OW/WORK_INDENT18(ST) | 18.00 |
| 8 | GBUDA/2025-26/OW/WORK_INDENT19(CAT IIA) | 8.00 |
| 9 | GBUDA/2025-26/OW/WORK_INDENT20(SC) | 20.00 |

**ಸೂಚನೆ:** ಕಾರಣಾಂತರಗಳಿಂದಾಗಿ ಈ ಕೆಳಗೆ ತಿಳಿಯಪಡಿಸಿದ ಟೆಂಡರ್ ದಿನಾಂಕಗಳು ಹಾಗೂ ಇನ್ನಿತರೆಯಾವುದೇ ಬದಲಾವಣೆಗಳಾದಲ್ಲಿ ಗುತ್ತೇದಾರರು ಇ-ಪ್ರೊಕ್ಯೂರ್‌ಮಂಟ್ ಪೋರ್ಟಲ್‌ನಲ್ಲಿ ಗಮನಿಸಬಹುದಾಗಿದೆ.

ಕ್ರಮ ಸಂಖ್ಯೆ (1) ಟೆಂಡರ್‌ಗಾಗಿ ನಿಗದಿಪಡಿಸಿದ ದಿನಾಂಕಗಳು ಕೆಳಗಿನಂತಿವೆ:

| | | |
|---|---|---|
| 2 | ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಟೆಂಡರ್‌ನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ | 23.07.2025ರಂದು 16:00 ಗಂಟೆಗೆ |
| 3 | ತಾಂತ್ರಿಕ ಬಿಡ್, ಆರ್ಥಿಕ ಬಿಡ್‌ನ್ನು ತೆರೆಯುವ ದಿನಾಂಕ ಮತ್ತು ಸಮಯ. | 24.07.2025ರಂದು 16:00 ಗಂಟೆಗೆ |

ಕ್ರಮ ಸಂಖ್ಯೆ (2 ರಿಂದ 09)ವರೆಗಿನ ಟೆಂಡರ್‌ಗಾಗಿ ನಿಗದಿಪಡಿಸಿದ ದಿನಾಂಕಗಳು ಕೆಳಗಿನಂತಿವೆ:

| | | |
|---|---|---|
| 2 | ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಟೆಂಡರ್‌ನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ | 31.07.2025ರಂದು 16:30 ಗಂಟೆಗೆ |
| 3 | ತಾಂತ್ರಿಕ ಬಿಡ್, ಆರ್ಥಿಕ ಬಿಡ್‌ನ್ನು ತೆರೆಯುವ ದಿನಾಂಕ ಮತ್ತು ಸಮಯ. | 02.08.2025ರಂದು 16:30 ಗಂಟೆಗೆ |

ಈ ಕೆಳಗಿನ ಕೋಷ್ಠಕದಲ್ಲಿರುವ ಇಂಡೆಂಟ್ ಸಂಖ್ಯೆಗಳ ಟೆಂಡರ್‌ಗಳನ್ನು ತಾಂತ್ರಿಕ ತೊಂದರೆಗಳಿಂದ ರದ್ದುಪಡಿಸಲಾಗಿದೆ. ಸದರ ಟೆಂಡರ್‌ಗಳನ್ನು ಪರಿಗಣಿಸಲಾಗುದಿಲ್ಲ.

| | | |
|---|---|---|
| 1 | GBUDA/2025-26/OW/WORK_INDENT7 | ರದ್ದುಪಡಿಸಲಾಗಿದೆ |
| 2 | GBUDA/2025-26/OW/WORK_INDENT8 | ರದ್ದುಪಡಿಸಲಾಗಿದೆ |
| 3 | GBUDA/2025-26/OW/WORK_INDENT110 | ರದ್ದುಪಡಿಸಲಾಗಿದೆ |
| 4 | GBUDA/2025-26/OW/WORK_INDENT13 | ರದ್ದುಪಡಿಸಲಾಗಿದೆ |
| 5 | GBUDA/2025-26/OW/WORK_INDENT12 | ರದ್ದುಪಡಿಸಲಾಗಿದೆ |
| 6 | GBUDA/2025-26/OW/WORK_INDENT14 | ರದ್ದುಪಡಿಸಲಾಗಿದೆ |

ಟೆಂಡರ್‌ನಲ್ಲಿನ ಹೆಚ್ಚಿನ ಮಾಹಿತಿಗಾಗಿ ರಜಾ ದಿನಗಳನ್ನು ಹೊರತುಪಡಿಸಿ ಕಚೇರಿ ವೇಳೆಯಲ್ಲಿ ಅಥವಾ https://kppp.karnataka.gov.in/ ವೆಬ್‌ಸೈಟ್‌ನಲ್ಲಿ ಅಥವಾ ಈ ಕಚೇರಿಯ **ದೂರವಾಣಿ ಸಂಖ್ಯೆ: 08372-278003** ರವರಿಂದ ಪಡೆಯಬಹುದಾಗಿದೆ ನಿಬಂಧನೆಗಳು (1) ಯಾವುದೇಕಾರಣಕ್ಕೂ ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಂಪರ್ಕಜಾಲ (ಆನ್‌ಲೈನ್) ಸಿಗದಿದ್ದರೆ ಈ ಕಚೇರಿ ಜವಾಬ್ದಾರಿಯಾಗಿರುವುದಿಲ್ಲ (2) ಇಂಡೆಂಟ್ ಸಂಖ್ಯೆ GBUDA/2025-26/OW/WORK_INDENT9 ನ್ನು(CAT-I) ಮೀಸಲಿರಿಸಿದ ಕಾಮಗಾರಿ ಆಗಿರುತ್ತದೆ. ಕಾರಣ ಸದರ ಪ್ರವರ್ಗದ ಗುತ್ತಿಗೆದಾರರು ಮಾತ್ರ ಭಾಗವಹಿಸತಕ್ಕದ್ದು. ಉಳಿದ ಗುತ್ತಿಗೆದಾರರು ಭಾಗವಹಿಸಿದ್ದಲ್ಲಿ ಪರಿಗಣಿಸಲಾಗುವುದಿಲ್ಲ. (3) ಯಾವುದೇ ಟೆಂಡರ್ ಅಂಗೀಕರಿಸುವ ಅಥವಾ ತಿರಸ್ಕರಿಸುವ ಅಧಿಕಾರ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ ಇವರು ಕಾಯ್ದಿರಿಸಿಕೊಂಡಿರುತ್ತಾರೆ ಹಾಗೂ ಇನ್ನುಳಿದ ಎಲ್ಲಾ ಷರತ್ತುಗಳು ಅನ್ವಯವಾಗಿತ್ತದೆ.

**ಸಹಿ/- ಆಯುಕ್ತರು**
**ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ**

ವಾ.ಸಾ.ಇ/ಗದಗ/181/ದೇಶಪಾಂಡೆಪಬ್ಲಿಸಿಟಿ/2025-26


# ದಲಿತರು, ಹಿಂದುಳಿದವರ ಅಭಿವೃದ್ಧಿ ಬಾಯಿ ಮಾತಿನಿಂದ ಆಗಲ್ಲ: ಬಸವರಾಜ ಬೊಮ್ಮಾಯಿ

■ವಿಜಯಸಾಕ್ಷಿ ಸುದ್ದಿ, ಗದಗ

ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನವನ್ನು ದಲಿತರಿಗೆ ನೀಡಬೇಕು ಅಂತ ಸಿಎಂ ಸಿದ್ದರಾಮಯ್ಯ ಹೇಳಿಕೆ ನೀಡಿದ್ದಾರೆ. ಆದರೆ, ದಲಿತರು ಮತ್ತು ಹಿಂದುಳಿದವರ ಅಭಿವೃದ್ಧಿ ಕೇವಲ ಬಾಯಿ ಮಾತಿನ ಘೋಷಣೆಯಿಂದ ಆಗುವುದಿಲ್ಲ. ಸಿಎಂ ಸಿದ್ದರಾಮಯ್ಯ ಅವರು ಕೇವಲ ಘೋಷಣೆಯಿಂದ ಹೊಟ್ಟೆ ತುಂಬುತ್ತದೆ ಎಂದು ತಿಳಿದುಕೊಂಡಿದ್ದಾರೆ. ಆ ಸಮುದಾಯಗಳಿಗೆ ಮೀಸಲಿಟ್ಟ ಹಣವನ್ನು ಸರಿಯಾಗಿ ನೀಡಲಿ ಎಂದು ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದರು.

ನಗರದಲ್ಲಿ ಗುರುವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಿಎಂ ದಲಿತರ ಬಗ್ಗೆ ಬಹಳ ಮಾತನಾಡುತ್ತಾರೆ. ಅವರು ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡದವರಿಗೆ ಮೀಸಲಿಟ್ಟ ಹಣವನ್ನು ಸರಿಯಾಗಿ ಕೊಟ್ಟರೆ ಸಾಕು. ಅದೇ ರೀತಿ ಹಿಂದುಳಿದವರ ಯೋಜನೆಗಳಿಗೆ ಟಾರ್ಗೆಟ್ ಕೊಟ್ಟಿಲ್ಲ. ಎಂಟು ಒಬಿಸಿ ನಿಗಮಗಳಿವೆ ಅವುಗಳಿಗೆ ಹಣವನ್ನೇ ನೀಡಿಲ್ಲ.



ಒಬಿಸಿಯನ್ನು ಉದ್ದಾರ ಮಾಡುತ್ತೇವೆ ಎನ್ನುತ್ತಾರೆ. ಇರುವ ಯೋಜನೆಗಳಿಗೆ ಹಣ ಕೊಡುವುದಿಲ್ಲ ಎಂದು ಸಿಎಂ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ದಲಿತರ ಯೋಜನೆಗಳಿಗೆ ಮೀಸಲಿಟ್ಟ ಹಣವನ್ನು ಕಡಿತ ಮಾಡುತ್ತಾರೆ. ಇದರ ಬಗ್ಗೆ ಮುಖ್ಯಮಂತ್ರಿ ಚರ್ಚೆ ಮಾಡಲಿ, ಯಾರೋ ಅಧ್ಯಕ್ಷರಾಗುವುದರಿಂದ ಏನೂ ಆಗುವುದಿಲ್ಲ. ಆ ಜನಾಂಗ ಅಭಿವೃದ್ಧಿ ಆಗಬೇಕು. ಜನಾಂಗ ಅಭಿವೃದ್ಧಿ ಆಗಬೇಕೆಂದರೆ ಅವರಿಗೆ ಯೋಜನೆಗಳು ತಲುಪಬೇಕು. ಕೇವಲ ಬಾಯಿ ಮಾತಿನ ಘೋಷಣೆಯಿಂದ ಏನೂ ಆಗುವುದಿಲ್ಲ. ಸಿಎಂ ಸಿದ್ದರಾಮಯ್ಯ ಅವರು ಕೇವಲ ಘೋಷಣೆಯಿಂದ ಹೊಟ್ಟೆ ತುಂಬುತ್ತದೆ ಎಂದು ತಿಳಿದುಕೊಂಡಿದ್ದಾರೆ ಎಂದು ಸಿಎಂ ಕಾಲೆಳೆದರು.

ರೈತರ ಬೆಳೆ ವಿಮೆ ಮಾಡಿಸುವ ಹೆಸರಿನಲ್ಲಿ ಏಜೆಂಟರ್ ಹಾವಳಿ ಹೆಚ್ಚಾಗಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಈ ಬಗ್ಗೆ ಈಗಾಗಲೇ ಜಿಲ್ಲಾಧಿಕಾರಿಗಳು ಸಭೆ ನಡೆಸಿದ್ದಾರೆ. ಬೆಳೆ ವಿಮೆ ಪಡೆಯಲು ಶೇ 20% ಬೋಗಸ್ ಫಲಾನುಭವಿಗಳು ಇರುತ್ತಿದ್ದರು ಅದನ್ನು ಈ ವರ್ಷ ತಡೆಯಲು ಸೂಚನೆ ನೀಡಿದ್ದೇನೆ. ರೈತರಿಗೆ ಬೆಳೆ ಸಾಲ ಹೆಚ್ಚಿನ ಪ್ರಮಾಣದಲ್ಲಿ ನೀಡಬೇಕು. ಎಕರೆವಾರು ನೀಡುವ ಸಾಲದ ಪ್ರಮಾಣ ಹೆಚ್ಚಾಗಬೇಕು ಎಂದರು.

ಸಹಕಾರಿ ಬ್ಯಾಂಕ್ ಗಳ ಮೂಲಕ ಸಾಲ ಪಡೆಯದೇ ಹೊರಗುಳಿದವರನ್ನು ಸಹಕಾರಿ ವ್ಯವಸ್ಥೆಯ ವ್ಯಾಪ್ತಿಗೆ ತಂದು ಸಾಲ ನೀಡಬೇಕು. ರೈತರಿಗೆ ಸಾಲ ಕೊಡುವಾಗ ಸಿಬಿಲ್ ಮಾನದಂಡ ಅನ್ವಯಿಸಬಾರದು ಎನ್ನುವುದು ನಮ್ಮ ಚಿಂತನೆ ಇದೆ. ಇದನ್ನು ರಾಷ್ಟ್ರ ಮಟ್ಟದಲ್ಲಿಯೇ ಮಾಡಲು ಪ್ರಯತ್ನಿಸಲಾಗುವುದು ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಹೇಳಿದರು. ಈ ವೇಳೆ ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka